

# ಸಿಹಿ ಕಹಿ

ಸಂಪಾದಕರು : ಮಾರುತಿ ಬಸವಂತಪ್ಪ ಹೊಸಮನಿ
Editor: MARUTIBASAVANTAPPAHOSAMANI
Cell : +91 9741319119

ಕನ್ನಡ ದಿನಪತ್ರಿಕೆ, ಬಾಗಲಕೋಟೆ
ಬಾಗಲಕೋಟೆಯಿಂದ ಪ್ರಕಟಿತ
RNI REG No. : KARKAN/2016/75068

SK NEWS ಕನ್ನಡ

SIHI KAHI
KANNADA DAILY MORNING
BAGALKOT

Volume : 06 | Issue : 314 | Sunday 25-08-2024 | E-mail : maruti.b.hosamani76@gmail.com | Page: 4 | Price : Rs. 1/-


## ಪುರುಷೋತ್ತಮ ಯೋಗವು ಸಕಲ ಶಾಸ್ತ್ರಗಳ ಸಾರವಾಗಿದೆ: ಪ್ರಮೋದಾಚಾರ್ಯ




**ಇಲಕಲ್ಲ :** ಭಗವದ್ಗೀತೆಯ ಹದಿನೈದನೆಯ ಅಧ್ಯಾಯವಾದ ಪುರುಷೋತ್ತಮ ಯೋಗವು ಭಗವಂತನನ್ನು ಸಾಕ್ಷಾತ್ಕರಿಸಿ ಕೊಳ್ಳುವ ಮಾರ್ಗಗಳನ್ನು ಹೇಳುತ್ತದೆ, ಇದು ಸಕಲ ಶಾಸ್ತ್ರಗಳ ಸಾರವಾಗಿದ್ದು. ಭಕ್ತಿ ಮಾರ್ಗಕ್ಕೆ ಪ್ರೇರಕವಾಗಿದೆ. ಎಂದು ಪಂ. ಪ್ರಮೋದಾಚಾರ್ಯ ಪೂಜಾರ ಹೇಳಿದರು. ಇಳಕಲ್ಲ ಶ್ರೀ ವೆಂಕಟೇಶ ದೇವಸ್ಥಾನದಲ್ಲಿ ನಡೆದಿರುವ ಭಗವದ್ಗೀತಾ ಅಭಿಯಾನ ಕಾರ್ಯಕ್ರಮದ ಎಂಟನೆಯ ಸಂಚಿಕೆಗೆ ಅವರು ಪ್ರವಚನಕಾರರಾಗಿ ಆಗಮಿಸಿದ್ದರು. ಈ ಕಾರ್ಯಕ್ರಮವನ್ನು ಇಳಕಲ್ಲ ಬ್ರಾಹ್ಮಣ ಸಮಾಜ, ಉತ್ತರಾದಿ ಮಠದ ಧರ್ಮ ಜ್ಞಾನವಾಹಿನಿ ಹಾಗೂ ಬಾಗಲಕೋಟೆಯ ವಿಶ್ವಮಾಧ್ವ ಪರಿಷದ್ ಸಂಸ್ಥೆಗಳು ಸಂಯುಕ್ತವಾಗಿ ಏರ್ಪಡಿಸಿದ್ದವು. ಕಾರ್ಯಕ್ರಮದ ನೇತೃತ್ವವನ್ನು ಬ್ರಾಹ್ಮಣ ಸಮಾಜದ ಅಧ್ಯಕ್ಷರಾದ ಪಾಂಡುರಂಗ ಕುಲಕರ್ಣಿ ಅವರು ವಹಿಸಿದ್ದರು.

ಸೌರಭ ದಾಸ ಸಾಹಿತ್ಯ ವಿದ್ಯಾಲಯದ ಅಧ್ಯಕ್ಷರಾಗಿರುವ ಪಂ. ಪ್ರಮೋದಾಚಾರ್ಯರ ಅಂತರರಾಷ್ಟ್ರೀಯ ಮಟ್ಟದಲ್ಲಿ ವಿದ್ಯಾರ್ಥಿ ಸಮೂಹವನ್ನು ಹೊಂದಿದ್ದಾರೆ. ನೂರಾರು ಕೇಂದ್ರಗಳಲ್ಲಿ ದಾಸ ಸಾಹಿತ್ಯದ ಅಧ್ಯಯನಕ್ಕಾಗಿ ಈ ಸಂಸ್ಥೆಯು ಪ್ರೋತ್ಸಾಹ ನೀಡುತ್ತಲಿದೆ. ಇಳಕಲ್ಲನಲ್ಲಿ ಕೂಡಾ ಈ ವಿದ್ಯಾಲಯದ ಕೇಂದ್ರವು ಆರಂಭವಾಗಿದೆ. ಲಕ್ಷ್ಮೀ ಮಹಿಳಾ ಮಂಡಳಿಯ ಅಧ್ಯಕ್ಷೆ ಶ್ರೀಮತಿ ಸಾವಿತ್ರಿ ಕುಲಕರ್ಣಿ ಅವರು ಸೌರಭ ವಿದ್ಯಾಲಯಕ್ಕೆ ಹೊಸ ವಿದ್ಯಾರ್ಥಿಗಳ ವಿವರವನ್ನು ಗುರುಗಳಿಗೆ ಹಸ್ತಾಂತರಿಸಿದರು.

ಶ್ರೀಹರಿ ಪೂಜಾರ, ಸುರೇಶ ಪೂಜಾರ, ವಿರುಪಾಕ್ಷ ಭಟ್ಟ ವೇದ ಪಾಠವನ್ನು ಹೇಳಿದರು. ಬಂಡು ಕಟ್ಟಿ ಕಾರ್ಯಕ್ರಮವನ್ನು ನಿರೂಪಿಸಿದರು. ಪದಾಧಿಕಾರಿಗಳಾದ ವಿಜಯ ಕಾರ್ಕಳ, ಕಾಶೀನಾಥ ದೇಶಪಾಂಡೆ, ಗಿರಿಧರ ದೇಸಾಯಿ ಕಾರ್ಯಕ್ರಮದ ವ್ಯವಸ್ಥೆಗಳ ಜವಾಬ್ದಾರಿ ವಹಿಸಿ ಕೊಂಡಿದ್ದರು. ನಾರಾಯಣಾಚಾರ್ಯ ಪೂಜಾರ, ವೆಂಕಟೇಶ ಪೂಜಾರ ಧಾರ್ಮಿಕ ಕಾರ್ಯಕ್ರಮಗಳನ್ನು ನಿರ್ವಹಿಸಿದರು.

ಅಭಿಯಾನದ ಎಂಟನೆಯ ಸಂಚಿಕೆಯ ಪ್ರಾಯೋಜಕತ್ವವನ್ನು ಡಾ. ಗುರುರಾಜ ಕಾಖಂಡಕಿ ಪರಿವಾರವು ವಹಿಸಿತ್ತು. ಗುರುಗಳು ಅವರನ್ನು ಸನ್ಮಾನಿಸಿದರು. ಕೊನೆಯ ದಿನದ ಪ್ರಸಾದ ಸೇವೆಯನ್ನು ಸತ್ಯನಾರಾಯಣ ಕರವಾ ಅವರು ಕೈಗೊಂಡರು.

ಲಕ್ಷ್ಮೀ ಮಹಿಳಾ ಮಂಡಳಿ ಹಾಗೂ ಬ್ರಾಹ್ಮಣ ಯುವಕ ಸಂಘಗಳ ಸದಸ್ಯರು ಪ್ರವಚನದಲ್ಲಿ ಸಕ್ರಿಯವಾಗಿ ಭಾಗವಹಿಸಿದ್ದರು. ಶ್ರೀ ರಾಘವೇಂದ್ರ ಸ್ವಾಮಿಗಳ ಆರಾಧನೆಯ ಸೇವೆಯನ್ನು ಕಳೆದ 48 ವರ್ಷಗಳಿಂದ ಸಲ್ಲಿಸುತ್ತಿರುವ ಮಂಗಳೂರ ಪರಿವಾರದ ಅರವಿಂದ ಮಂಗಳೂರು ದಂಪತಿಗಳನ್ನು ಗುರುಗಳು ಸನ್ಮಾನಿಸಿದರು. ಸಭಿಕರು ಮೌನವಾಗಿ ಏಕಾಗ್ರತೆಯಿಂದ ಭಗವದ್ಗೀತೆಯ ಪಾಠವನ್ನು ಆಲಿಸಿದರು.

**ತಾಲೂಕ ವರದಿಗಾರರು, ಸಿಹಿ ಕಹಿ ಕನ್ನಡ ದಿನ ಪತ್ರಿಕೆ ಹಾಗೂ ಎಸ್.ಕೆ ನ್ಯೂಸ್ ಕನ್ನಡ ಚಾನಲ್: ಪ್ರತಾಪ್.ವಾಯ್.ಕಿಳ್ಳಿ. ಇಲಕಲ್ಲ.**

## "ರಾಷ್ಟ್ರೀಯ ಸಾಂಕ್ರಾಮಿಕ ರೋಗಗಳ ತಡೆಗೆ"-ಆರೋಗ್ಯ ಅರಿವು ಜಾಗೃತಿ




**ಶಿರೂರು :** ಜಿಲ್ಲಾ ಆಡಳಿತ, ಜಿಲ್ಲಾ ಪಂಚಾಯತ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಬಾಗಲಕೋಟೆ ಪ್ರಾಥಮಿಕ ಆರೋಗ್ಯ ಕೇಂದ್ರ ಶಿರೂರ ಸಹಯೋಗದಲ್ಲಿ, ಮನ್ನಿಕಟ್ಟಿ ಗ್ರಾಮದಲ್ಲಿ "ರಾಷ್ಟ್ರೀಯ ಸಾಂಕ್ರಾಮಿಕ ರೋಗಗಳ ತಡೆಗೆ ಆರೋಗ್ಯ ಅರಿವು ಜಾಗೃತಿ" ಆಯೋಜಿಸಲಾಗಿತ್ತು. ಪ್ರಾಸ್ತಾವಿಕವಾಗಿ, ಆರೋಗ್ಯ ನಿರೀಕ್ಷಣಾಧಿಕಾರಿ ಎಸ್.ಎಸ್ ಅಂಗಡಿಯವರು, "ಆರೋಗ್ಯದ ಸಿರಿತನಕ್ಕೆ ಮುಂಜಾಗ್ರತೆ ಅರಿವು ಇರಲಿ" ಸ್ವಚ್ಛತೆ ಶುದ್ಧತೆ ಮುಂಜಾಗ್ರತೆ ಆರೋಗ್ಯವಂತ ಕುಟುಂಬ ಆರೋಗ್ಯವಂತ ಸಮಾಜ ನಿರ್ಮಾಣ ಸಾಧ್ಯ. ಸೊಳ್ಳೆಗಳ ಕಚ್ಚುವಿಕೆಯಿಂದ ಮಲೇರಿಯಾ, ಆನೆಕಾಲು ರೋಗ ಮೆದುಳು ಜ್ವರ ಡೆಂಗ್ಯೂ, ಚಿಕೂನ್ ಗುನ್ಯಾ, ಝಿಕಾ ಮಾರಣಾಂತಿಕ ರೋಗಗಳ ಒಬ್ಬರಿಂದ ಒಬ್ಬರಿಗೆ ಸಾಂಕ್ರಾಮಿಕವಾಗಿ ಹರಡುವುವು. ಸೊಳ್ಳೆಗಳ ಉತ್ಪತ್ತಿ ತಾಣಗಳಾದ ತಗ್ಗು ಪ್ರದೇಶ, ಚರಂಡಿ ನೀರು ನಿಲ್ಲದಂತೆ, ನೀರಿನ ಸಂಗ್ರಹಗಳ ಮೇಲೆ ತಪ್ಪದೇ ಮುಚ್ಚಳಿಕೆ ಹಾಕಬೇಕು ಒಡೆದ ಬಾಟಲ್ ಟೈರ್ ಟ್ಯೂಬ್ ಟೆಂಗಿನ ಚಿಪ್ಪು. ಕಸ ವಿಲೇವಾರಿ ಮಾಡಬೇಕು ಮನೆ ಸುತ್ತ ಮುತ್ತ ಪರಿಸರ ಸ್ವಚ್ಛತೆ ಕಾಪಾಡಿ ಕೊಳ್ಳಬೇಕು ವೈಯಕ್ತಿಕ ಸ್ವಚ್ಛತೆ ಆದ್ಯತೆ ನೀಡಬೇಕು ಸೊಳ್ಳೆ ಪರದೆ ನಿರೋಧಕ ಬಳಸಬೇಕು ಮೈತುಂಬ ಬಟ್ಟೆ ಧರಿಸ ಬೇಕು ಯಾವುದೇ ತರಹ ಜ್ವರ ಕಾಣಿಸಿದರೆ ಹತ್ತಿರದ ಸರಕಾರಿ ಆಸ್ಪತ್ರೆಗೆ ಭೇಟಿ ನೀಡಿರಿ. ಪರೀಕ್ಷೆ ಚಿಕಿತ್ಸೆ ಉಚಿತವಾಗಿರುತ್ತದೆ ಆರೋಗ್ಯ ಸಮಸ್ಯೆಗಳಿಗೆ 104 ಕರೆ ಮಾಡಿ ಪರಿಹಾರ ಪಡೆದು ಕೊಳ್ಳಬಹುದು. ಆರೋಗ್ಯ ಅಧಿಕಾರಿಗಳು ಆಶಾ ಸ್ವಯಂ ಸೇವಕರು ತಮ್ಮ ಮನೆಗೆ ಬಂದಾಗ ಸರಿಯಾದ ಮಾಹಿತಿ ನೀಡಿ ಸಹಕರಿಸ ಬೇಕು ಆರೋಗ್ಯ ಇಲಾಖೆಯ ಸವಲತ್ತುಗಳ ಸದುಪಯೋಗ ಪಡೆದು ಕೊಳ್ಳಬೇಕು ಎಂದು ಗ್ರಾಮಸ್ಥರಲ್ಲಿ ಜಾಗೃತಿ ಮೂಡಿಸಿದರು."ರಾಷ್ಟ್ರೀಯ ಸಾಂಕ್ರಾಮಿಕ ರೋಗಗಳ ತಡೆಗೆ ಆರೋಗ್ಯ ಅರಿವು ಜಾಗೃತಿ" ಕಾರ್ಯಕ್ರಮದಲ್ಲಿ ಆರೋಗ್ಯ ಇಲಾಖೆಯ ಅಧಿಕಾರಿಗಳು, ಆಶಾ ಕಾರ್ಯಕರ್ತೆಯರು, ಗ್ರಾಮದ ಮುದಿಯಪ್ಪ ಬೇನಾಳ, ಮನೋಹರ ಶಿ ಡಪಳಿ, ಬರ್ಮಪ್ಪ ಹ ಗೌಡರ, ಸಂಗಪ್ಪ ಮೈ ಹುಣಶೀಕಟ್ಟಿ, ಸಂಗಪ್ಪ ರೇ ಜುಮನಾಳ, ಮಲ್ಲಪ್ಪ ಗು ಕಾಮನಕೇರಿ ಮುಖಂಡರು ಯುವಕರು ಭಾಗವಹಿಸಿದ್ದರು.

## 'ಮಹಾ' ನೀರು ಹರಿವಿನಲ್ಲಿ ಭಾರಿ ಇಳಿಕೆ: ಹಿಪ್ಪರಗಿ ಜಲಾಶಯಕ್ಕೆ 25 ಸಾವಿರ ಕ್ಯುಸೆಕ್ ನೀರು: 5.8 ಟಿಎಂಸಿ ನೀರು ಸಂಗ್ರಹ



**ರಬಕವಿ-ಬನಹಟ್ಟಿ :** ಬಾಗಲಕೋಟೆ ಜಿಲ್ಲೆಯ ಜಮಖಂಡಿ ತಾಲೂಕಿನ ಹಿಪ್ಪರಗಿ ಜಲಾಶಯಕ್ಕೆ ಮಹಾರಾಷ್ಟ್ರದ ಪಶ್ಚಿಮ ಘಟ್ಟಗಳಿಂದ, ಅಲ್ಲಿನ ಕೃಷ್ಣಾ ನದಿಯ ಎಲ್ಲ ಜಲಾಶಯಗಳ ನೀರಿನ ಸ್ಥಿತಿಗತಿ, ಸುರಿಯುತ್ತಿರುವ ಮಳೆಯ ಬಗ್ಗೆ ನಿತ್ಯವೂ ನಿಗಾ ವಹಿಸಲಾಗುತ್ತಿದ್ದು, ಸದ್ಯದ ಸ್ಥಿತಿಯಲ್ಲಿ 'ಮಹಾರಾಷ್ಟ್ರದಿಂದ ಬರುವ ನೀರಿನ ಪ್ರಮಾಣ ಅತ್ಯಂತ
ಕಡಿಮೆಯಾಗಿರುವ ಹಿನ್ನೆಲೆ ಸೋಮವಾರದಂದು 25 ಸಾವಿರ ಕ್ಯುಸೆಕ್ಗೆ ಇಳಿಕೆ ಕಂಡಿರುವುದರಿಂದ ಪ್ರವಾಹದ ಭೀತಿಯಿಂದ ದೂರ ಉಳಿಯುವಂತಾಗಿದೆ.

ಕಳೆದೊಂದು ವಾರದಿಂದ ಜಲಾಶಯದಲ್ಲಿನ ಎಲ್ಲ 22 ಗೇಟ್ಗಳನ್ನು ಮುಚ್ಚಿದ್ದು, ಬಂದ ನೀರು ಹಿಪ್ಪರಗಿ ಜಲಾಶಯದಲ್ಲಿ ಶೇಖರಣೆಯಾಗುತ್ತಿದೆ.

ಇದೀಗ 6 ಟಿಎಂಸಿಯಷ್ಟು ನೀರು ಸಂಗ್ರಹದ ಸಾಮರ್ಥ್ಯ ಹೊಂದಿರುವ ಹಿಪ್ಪರಗಿ ಅಣೆಕಟ್ಟಿನಲ್ಲಿ 5.8 ಟಿಎಂಸಿಯಷ್ಟು ನೀರು ಸಂಗ್ರಹವಿದೆ.

## ಶೈಕಣಿಕ ಅಭಿವೃದ್ಧಿಗೆ ಹಳೆ ವಿದ್ಯಾರ್ಥಿಗಳ ಕೊಡುಗೆ ಸಹಕಾರಿ: ಯಂಡಿಗೇರಿ



**ರಬಕವಿ :** ವಿದ್ಯೆ ಕಲಿತ ಶಾಲೆಗೆ ಕೊಡುಗೆ ನೀಡಿದ ಹಳೆ ವಿಧ್ಯಾರ್ಥಿಗಳ ಸೇವೆ ನಿಜಕ್ಕೂ ಶ್ಲಾಘನೀಯ ಎಂದು ರಬಕವಿ ಶಿಕ್ಷಣ ಸಂಸ್ಥೆಯ ಚೇರ್ಮನ್ ಬಸವರಾಜ ಯಂಡಿಗೇರಿ ಹೇಳಿದರು.

ಸೋಮವಾರ ಸಂಸ್ಥೆಯ ಆವರಣದಲ್ಲಿ 1992-93 ಸಾಲಿನ ಎಸ್.ಎಸ್.ಎಲ್.ಸಿ. ವಿಧ್ಯಾರ್ಥಿಗಳು ಸಂಸ್ಥೆಯಲ್ಲಿನ ವಿಧ್ಯಾರ್ಥಿಗಳಿಗೆ ನೂತನ ತಂತ್ರಜ್ಞಾನದ ಸೌಲಭ್ಯದ ಶೈಕಣಿಕ ಅಭಿವೃದ್ಧಿಗಾಗಿ ಕೊಡುಗೆ ನೀಡಿದ ಇಪ್ಪತ್ತೈದು ಸಾವಿರ ರೂ. ದೇಣಿಗೆ ಸ್ವೀಕರಿಸಿ ಅವರು ಮಾತನಾಡಿದರು.


ಇದೇ ಸಂದರ್ಭದಲ್ಲಿ ಹಳೆ ವಿದ್ಯಾರ್ಥಿಗಳ ಪರವಾಗಿ ಮಾತನಾಡಿದ ಚಿದಾನಂದ ಬೆಳಗಲಿ ಕಲಿತ ಶಾಲೆಗೆ ಒಂದಿಷ್ಟು ಋಣ ತೀರಿಸಲು ಸಣ್ಣ ಪ್ರಯತ್ನ ಈ ಮೂಲಕ ಮಾಡಿದ್ದು ಮುಂದಿನ ಪೀಳಿಗೆಗೆ ಅನುಕೂಲವಾಗುವ ವಸ್ತುಗಳನ್ನು ತೆಗೆದುಕೊಳ್ಳಲು ಮನವಿ ಮಾಡಲಾಗಿದೆ ಎಂದರು.

ಈ ಸಂದರ್ಭದಲ್ಲಿ ಹಳೆ ವಿದ್ಯಾರ್ಥಿಗಳಾದ ಶಂಕರ ಬಕ್ಕಣ್ಣವರ, ಮಂಜುನಾಥ ಅರಬಳ್ಳಿ, ಅಶೋಕ ಕುಚನೂರ, ಸಂಗಮೇಶ ಹತಪಾಕಿ, ಶಿವಾನಂದ ಹಿರೇಮಠ, ಬಸವರಾಜ ಹಲ್ಯಾಳ, ಸತೀಶ ಉಮದಿ, ಪ್ರಕಾಶ ಕೊಣ್ಣೂರ ಸೇರಿದಂತೆ ಸಂಸ್ಥೆಯ ಆಡಳಿತ ಮಂಡಳಿ ಶಿಕ್ಷಕ ಶಿಕ್ಷಕಿಯರು ಹಾಜರಿದ್ದರು.

## ಸಹಾಯಕ ಕೃಷಿ ನಿರ್ದೇಶಕರ ಕುಮ್ಮಕ್ಕಿನಿಂದ, ಮಹಾಂತೇಶ್ವರ ಆಗ್ರೋ ಟ್ರೇಡರ್ಸ್ ಮಾಲೀಕನ ವಿರುದ್ಧ-ತೀವ್ರ ಕ್ರಮ, ಮತ್ತು ಕ್ರಿಮಿನಲ್ ಪ್ರಕರಣ ದಾಖಲಿಸಲು ಆಗ್ರಹ



**ಬಳ್ಳಾರಿ :** ಕರ್ನಾಟಕ ದಲಿತ ರಕ್ಷಣಾ ವೇದಿಕೆ ಜಿಲ್ಲಾ ಸಮಿತಿ ಬಳ್ಳಾರಿ ಸಿರುಗುಪ್ಪ ತಾಲೂಕಿನ ನಗರದ ಶ್ರೀ ಮಹಾಂತೇಶ್ವರ ಆಗ್ರೋ ಟ್ರೇಡರ್ಸ್ ಮಾಲೀಕನು ರೈತರಿಗೆ ಬೇಕಾಗಿದ್ದಂತ 3201 ಹೈಟೆಕ್ ಜೋಳದ ಬೀಜಗಳನ್ನು ಸರಕಾರ ವಿಧಿಸಿದ ದರ 3 ಕೆಜಿ ಪಾಕೆಟ್ ಗೆ 1.300 ರೂಪಾಯಿ ಇದ್ದು ಇವರು ಹೆಚ್ಚುವರಿಯಾಗಿ 450 ರೂಪಾಯಿಗಳನ್ನು ಸುಮಾರು ರೈತರಿಂದ ಅಕ್ರಮವಾಗಿ ರಾಜಾರೋಷವಾಗಿ ಸರಕಾರ ಕೃಷಿ ಇಲಾಖೆ ಅಧಿಕಾರಿಗಳು ಸರಕಾರದ ದರವನ್ನು ನಿಗದಿ ಪಡಿಸಿ ದರಕ್ಕಿಂತ ಹೆಚ್ಚಿನ ದರವನ್ನು ಏನಾದರೂ ಆಗ್ರೋ ಟ್ರೇಡರ್ಸ್ ಮಾಲೀಕರು ಮಾರಾಟವನ್ನು ಮಾಡಿದ ಕಾನೂನಿನ ಕ್ರಮವನ್ನು ಜರುಗಿಸ ಬೇಕಾಗುತ್ತದೆ ಎಂದು ಎಲ್ಲಾ ಅಂಗಡಿಯ ಮಾಲೀಕರಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು. ಇದು ಬರಿ ಕಾಗದ ಮೇಲೆ ಆದೇಶ ಮಾಡಿ ಕೈ ತೊಳೆದು ಕೊಂಡರೆ ಸಾಲದು ಇದು ಪ್ರತಿ ವರ್ಷ ಕೃಷಿ ಅಧಿಕಾರಿಗಳು ಸೂಚನೆ ನೀಡುವುದು ಸರ್ವೆ ಸಾಮಾನ್ಯ ಎಂದು ಶ್ರೀ ಮಹಾಂತೇಶ್ವರ ಆಗ್ರೋ ಟ್ರೇಡರ್ಸ್ ಮಾಲೀಕನು ಯಾವ ಅಧಿಕಾರಿ ನಮಗೇನು ಮಾಡಿ ಕೊಳ್ಳಲಿಕ್ಕೆ ಆಗುವುದಿಲ್ಲ ಎಂದು ರಾಜಾರೋಷವಾಗಿ ಹೇಳಿ ಕೊಳ್ಳುತ್ತಿರಲಿಕ್ಕೆ ಕಾರಣ ಕೃಷಿ ಸಹಾಯಕ ನಿರ್ದೇಶಕರು ಸಂಪೂರ್ಣವಾದ ಕುಮ್ಮಕ್ಕು ಇದರಿಂದ ಸಿರುಗುಪ್ಪ ನಗರದಲ್ಲಿ ನಡೆಯುವುದಕ್ಕೆ ಕಾರಣ ಅಗಿದ್ದರಿಂದ ಕೃಷಿ ಸಹಾಯಕ ನಿರ್ದೇಶಕರು ತಮ್ಮ ಅಧಿಕಾರ ದುರ್ಬಳಕೆ ಕಾಯ್ದೆಯ ಅಡಿಯಲ್ಲಿ ಇವರನ್ನು ಕೂಡಲೇ ಅಮಾನತ್ತು ಗೊಳಿಸಿ ಹಾಗೂ ಶ್ರೀ ಮಹಾಂತೇಶ್ವರ ಆಗ್ರೋ ಟ್ರೇಡರ್ಸ್ ಅಂಗಡಿಯ ಲೈಸೆನ್ಸ್ ಅನ್ನು ಕಪ್ಪು ಪಟ್ಟಿಗೆ ಸೇರಿಸಿ ಮತ್ತು ಅಂಗಡಿಯ ಮಾಲೀಕನ ಮೇಲೆ ಕ್ರಿಮಿನಲ್ ಪ್ರಕರಣವನ್ನು ಕೂಡಲೇ ದಾಖಲಿಸ ಬೇಕೆಂದು ಕರ್ನಾಟಕ ದಲಿತ ರಕ್ಷಣಾ ವೇದಿಕೆ ತಮ್ಮಲ್ಲಿ ಒತ್ತಾಯಿಸುತ್ತದೆ ಇದರ ಬಗ್ಗೆ ತಾವು ಕ್ರಮ ಜರುಗಿಸಲಾರದೆ ಹೋದ ಪಕ್ಷದಲ್ಲಿ ನಿಮ್ಮ ಕಚೇರಿಯ ಮುಂದೆ ಧರಣಿ ಸತ್ಯಾಗ್ರಹವನ್ನು ಹಮ್ಮಿ ಕೊಳ್ಳಬೇಕಾಗುತ್ತದೆ ಇದಕ್ಕೆ ತಾವುಗಳು ಅವಕಾಶ ಮಾಡಿಕೊಡ ಲಾರದಂತೆ ಕೂಡಲೇ ಸೂಕ್ತ ಕ್ರಮ ಕೈಗೊಳ್ಳ ಬೇಕೆಂದು ತಮ್ಮಲ್ಲಿ ಕರ್ನಾಟಕ ದಲಿತ ರಕ್ಷಣಾ ವೇದಿಕೆಯ ಜಿಲ್ಲಾ ಸಮಿತಿಯ
ಕೆ ಶಂಕರ್ ನಂದಿಹಾಳ್ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಪತ್ರಿಕಾ ಮೂಲಕ ಆಗ್ರಹಿಸಿದ್ದಾರೆ.


ಕರ್ನಾಟಕ ದಲಿತ ರಕ್ಷಣಾ ವೇದಿಕೆ (ರಿ)
ಜಿಲ್ಲಾ ಸಮಿತಿ, ಬಳ್ಳಾರಿ-ವಿಜಯನಗರ
ದಿನಾಂಕ 23.8.2024

## ಪುಟ್ ಬಾಲ್, ಬಾಸ್ಕೆಟ್ ಬಾಲ್ ಸೇರಿದಂತೆ ಗಂಗಾ ಪದವಿ ಪೂರ್ವ ಕಾಲೇಜಿನ ವಿದ್ಯಾರ್ಥಿಗಳು ವಿವಿಧ ಕ್ರೀಡೆಗಳಲ್ಲಿ-ಜಿಲ್ಲಾ ಮಟ್ಟಕ್ಕೆ ಆಯ್ಕೆ

**ಹಿರಿಯೂರು :** ದಿನಾಂಕ: 23, 24 ರಂದು ತಾಲ್ಲೂಕು ಕ್ರೀಡಾಂಗಣದಲ್ಲಿ ನಡೆದ ತಾಲ್ಲೂಕು ಮಟ್ಟದ ಕ್ರೀಡಾಕೂಟದಲ್ಲಿ ಗಂಗಾ ಪದವಿ ಪೂರ್ವ ಕಾಲೇಜಿನ ವಿದ್ಯಾರ್ಥಿಗಳು ಬಾಲಕರ ವಿಭಾಗದ ಫುಟ್ಬಾಲ್, ಬಾಲಕೀಯರ ವಿಭಾಗದ ಬಾಸ್ಕೆಟ್ಬಾಲ್ ಸ್ಪರ್ಧೆಯಲ್ಲಿ ಪ್ರಥಮ ಸ್ಥಾನದಲ್ಲಿ ಗೆದ್ದು ಜಿಲ್ಲಾ ಮಟ್ಟಕ್ಕೆ ಆಯ್ಕೆಯಾಗಿದ್ದಾರೆ. ಹಾಗೂ ಬಾಲಕೀಯರ ವಿಭಾಗದ ಚೆಸ್ ನಲ್ಲಿ ಮಾನ್ಯ ಶ್ರೀ ಹಾಗೂ ಬಾಲಕರ ವಿಭಾಗದ ಚೆಸ್ ನಲ್ಲಿ ಮಹಮದ್ ಹಯಾದ್ ಜಿಲ್ಲಾ ಮಟ್ಟಕ್ಕೆ ಆಯ್ಕೆಯಾದರೆ, ಬಾಲಕೀಯರ ವಿಭಾಗದ ವಾಲಿಬಾಲ್ ನಲ್ಲಿ ಸುಭಿಕ್ಷಾ ಜಿಲ್ಲಾ ಮಟ್ಟಕ್ಕೆ ಆಯ್ಕೆ ಯಾಗಿದ್ದಾರೆಂದು ವ್ಯವಸ್ಥಾಪಕ ನಿರ್ದೇಶಕರಾದ ಪ್ರಶಾಂತ್ ಓಬಯ್ಯ ತಿಳಿಸಿದ್ದಾರೆ.

ಜಿಲ್ಲಾ ಮಟ್ಟದ ಕ್ರೀಡೆಗಳಲ್ಲಿ ಸಹ ಭಾಗವಹಿಸಿ ಪ್ರಶಸ್ತಿ ಗಳಿಸಲಿ ಎಂದು ಗಂಗಾ ಸೆಂಟ್ರಲ್ ಕಾಲೇಜಿನ ಎಲ್ಲ ಉಪನ್ಯಾಸಕರು ಮತ್ತು ಆಡಳಿತ ಸಿಬ್ಬಂದಿ ಶುಭ ಕೋರಿದ್ದಾರೆ.

**ವರದಿ:ಕೋಡಿಹಳ್ಳಿ.ಟಿ.ಶಿವಮೂರ್ತಿ.ಚಿತ್ರದುರ್ಗ**



# ಬೆಳೆಗಳಿಗೆ ಡ್ರೋನ್ ಮೂಲಕ ಪೋಷಕಾಂಶಗಳ ಸಿಂಪಡಣೆಗೆ ಸಚಿವರಿಂದ ಚಾಲನೆ

## ಕೃಷಿ ಚಟುವಟಿಕೆಗಳಲ್ಲಿ ಹೊಸ ವೈಜ್ಞಾನಿಕ ಪದ್ಧತಿ ಅಳವಡಿಕೆಗೆ ಸಚಿವ ಸತೀಶ್ ಜಾರಕಿಹೊಳಿ ಕರೆ

**ಬೆಳಗಾವಿ :** ಜಿಲ್ಲಾ ಪಂಚಾಯತ್, ಕೃಷಿ ಇಲಾಖೆ ಹಾಗೂ ರೋಟರಿ ಕ್ಲಬ್ ವತಿಯಿಂದ (ಆ.17) ಹತ್ತರಗಿ ಬಳಿಯ ಕೃಷಿ ಜಮೀನಿನಲ್ಲಿ ಆಯೋಜಿಸಲಾದ ಸೋಯಾ ಅವರೆ ಬೆಳೆಗೆ ಡ್ರೋನ್ ಮೂಲಕ ಪೋಷಕಾಂಶಗಳ ಸಿಂಪಡಣೆ ಕಾರ್ಯಕ್ಕೆ ಲೋಕೋಪಯೋಗಿ ಇಲಾಖೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಸತೀಶ್ ಜಾರಕಿಹೊಳಿ ಅವರು ಚಾಲನೆ ನೀಡಿದರು.




ಈ ವೇಳೆ ಮಾತನಾಡಿದ ಅವರು, ಡ್ರೋನ್ ಮೂಲಕ ಪೋಷಕಾಂಶಗಳ ಸಿಂಪರಣೆ ರೈತರ ಕೃಷಿ ಚಟುವಟಿಕೆಗಳಿಗೆ ಅನುಕೂಲ ಮಾಡಿಕೊಡುವ ವಿನೂತನ ಪದ್ಧತಿಯಾಗಿದೆ. ರೈತ ಬಾಂಧವರು ಇದರ ಸದುಪಯೋಗವನ್ನು ಪಡೆದುಕೊಳ್ಳಬೇಕು. ಇದರಿಂದ ರೈತರಿಗೆ ಬಹಳಷ್ಟು ಅನುಕೂಲವಾಗಲಿದೆ ಎಂದು ಹೇಳಿದರು.

ಹೊಸ ತಂತ್ರಜ್ಞಾನ ಬಳಕೆ ಮೂಲಕ ಎಲ್ಲ ರೈತರು ಕೃಷಿ ಚಟುವಟಿಕೆಗಳನ್ನು ಇನ್ನಷ್ಟು ವೇಗವಾಗಿ ನಿರ್ವಹಿಸಲು ಸಹಾಯಕವಾಗಿದೆ. ಇದರಿಂದ ಸಮಯ, ಹಣ ಉಳಿತಾಯವಾಗಲಿದೆ. ಇಂತಹ ವೈಜ್ಞಾನಿಕ ಪದ್ಧತಿಯನ್ನು ಬಳಸಿಕೊಂಡು ಕೃಷಿ ಕ್ಷೇತ್ರದಲ್ಲಿ ರೈತರು ಮತ್ತಷ್ಟು ಅಭಿವೃದ್ಧಿ ಹೊಂದಬೇಕು ಎಂದು ಸಚಿವ ಸತೀಶ್ ಜಾರಕಿಹೊಳಿ ಅವರು ತಿಳಿಸಿದರು.

ಕೃಷಿ ಇಲಾಖೆ ಜಂಟಿ ನಿರ್ದೇಶಕ ಶಿವನಗೌಡ ಪಾಟೀಲ ಅವರು ಮಾತನಾಡಿ, ಸೋಯಾ ಅವರೆ ಬೆಳೆಗೆ ಪೋಷಕಾಂಶಗಳ ಸಿಂಪರಣೆಗೆ ಸುಮಾರು 37 ಡ್ರೋನ್ ಗಳು ಬಳಕೆ ಮಾಡಲಾಗುತ್ತಿದೆ. ರೈತರು ಬೆಳೆದ ವಿವಿಧ ಬೆಳೆಗಳಿಗೆ ಪೋಷಕಾಂಶ ಮತ್ತು ರಸಗೊಬ್ಬರಗಳನ್ನು ಸಿಂಪರಣೆ ಮಾಡಲು ಈ ವಿಧಾನ ಸುಲಭವಾಗಿದೆ ಎಂದು ಹೇಳಿದರು. ಪ್ರತಿ ಎಕರೆ ಸಿಂಪರಣೆಗೆ ಸುಮಾರು 400 ರುಪಾಯಿ ಖರ್ಚು ತಗಲುತ್ತದೆ. ಡ್ರೋನ್ ಮೂಲಕ ವಿವಿಧ ಬೆಳೆಗಳಿಗೆ ಕೀಟನಾಶಕ, ರಸಗೊಬ್ಬರ ಸಿಂಪರಣೆ ಮಾಡಬಹುದು. ರೈತರಿಗೆ ತಾಂತ್ರಿಕತೆಯ ಅರಿವು ಮೂಡಿಸುವ ಉದ್ದೇಶದಿಂದ ಈ ಕಾರ್ಯಕ್ರಮ ಆಯೋಜನೆ ಮಾಡಲಾಗಿದೆ.

ಆಯಾ ರೈತ ಸಂಪರ್ಕ ಕೇಂದ್ರದಲ್ಲಿ ಅಥವಾ ಕೃಷಿ ಇಲಾಖೆಯನ್ನು ಸಂಪರ್ಕಿಸಿ ಡ್ರೋನ್ ಬಳಕೆ ಬಗ್ಗೆ ಮಾಹಿತಿ ಪಡೆಯಬಹುದಾಗಿದೆ. ಕಿತ್ತೂರು ಬೈಲಹೊಂಗಲ ಬಾಗೇವಾಡಿಯಲ್ಲಿ ಕಬ್ಬು ಬೆಳೆಗೆ ಈಗಾಗಲೇ ಬಳಕೆ ಮಾಡಲಾಗುತ್ತಿದೆ.

ವಿವಿಧ ಖಾಸಗಿ ಉದ್ಯಮಗಳ ರೈತ ಸ್ನೇಹಿ ಯೋಜನೆ ಇದಾಗಿದೆ. ರೈತರಿಗೆ ತಲುಪಿಸಲು ಕೃಷಿ ಇಲಾಖೆ ಈ ಕಾರ್ಯಕ್ರಮ ಆಯೋಜಿಸಿದ್ದು, ರೈತರು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ತಿಳಿಸಿದರು.

ಈ ಪದ್ಧತಿ ಇದರಿಂದ ರೈತರಿಗೆ ಸಮಯ, ಶ್ರಮ ಉಳಿತಾಯದ ಜೊತೆಗೆ ಆರ್ಥಿಕ ಹೊರೆ ಕಡಿಮೆಯಾಗಲಿದೆ. ಈ ಕುರಿತು ಕೃಷಿ ಇಲಾಖೆಯಿಂದ ರೈತರಿಗೆ ತಿಳುವಳಿಕೆ ಕೂಡ ಮೂಡಿಸಲಾಗುತ್ತದೆ ಎಂದು ಕೃಷಿ ಇಲಾಖೆ ಜಂಟಿ ನಿರ್ದೇಶಕ ಶಿವನಗೌಡ ಪಾಟೀಲ ಅವರು ರೈತಸ್ನೇಹಿ ಡ್ರೋನ್ ಗಳ ಬಳಕೆ ಕುರಿತು ಮಾಹಿತಿ ನೀಡಿದರು.

ಕೃಷಿ ಇಲಾಖೆಯ ಉಪ ನಿರ್ದೇಶಕರಾದ ಡಾ.ಎಚ್.ಡಿ.ಕೋಳೆಕರ, ಡಾ.ಕೊಂಗವಾಡ, ಹುಕ್ಕೇರಿ ತಹಶೀಲ್ದಾರ ಮಂಜುಳಾ ನಾಯಕ, ರೋಟರಿ ಜಿಲ್ಲಾ ಗವರ್ನರ್ ಶರದ್ ಪೈ, ರೋಟರಿ ಅಧ್ಯಕ್ಷ ಸುಹಾಸ್ ಚಂಡಕ್, ಚೇರಮನ್ ಪ್ರಶಾಂತ ಹಾಲಪ್ಪನವರ, ಡಾ.ಶಿಲ್ಪಾ ಕೋಡಕಣಿ, ಮುಕುಂದ ಬಾಂಗ್, ಡಾ.ಸಂತೋಷ ಪಾಟೀಲ, ಸಂದೀಪ್ ನಾಯ್ಕ, ನಿತೀನ್ ಗುಜ್ಜರ್, ಡಾ.ಶಂಕರ್ ಗೋಯೆಂಕಾ, ಚಂದ್ರಕಾಂತ ಪಾಟೀಲ(ಬೇಡಕಿಹಾಳ) ಮತ್ತಿತರರು ಉಪಸ್ಥಿತರಿದ್ದರು.

# ಸರ್ಕಾರಿ ಆಸ್ಪತ್ರೆ, ಶಾಲೆಗೆ ಭೇಟಿ: ಪರಿಶೀಲನೆ



**ಚನ್ನಮ್ಮನ ಕಿತ್ತೂರು :** ತ್ವರಿತ ಗತಿಯಲ್ಲಿ ಸೋರುತ್ತಿರುವ ಮತ್ತು ಹಾಳಾದ ಕಟ್ಟಡಗಳನ್ನು ತೆರವುಗೊಳಿಸಿ, ತಕ್ಷಣವೇ ಎಸ್ಟಿಮೆಟ್ ಮಾಡಿಕೊಡಿ ಸರ್ಕಾರದ ಗಮನ ಸೆಳೆಯಲಾಗುವುದು, ಎಂದು ತಾಪಂ ಇಓ ಕಿರಣ ಗೋರ್ಪಡೆ ಜಿಪಂ ಅಭಿಯಂತರುಗಳಿಗೆ ಸೂಚಿಸಿದರು.

ತಾಲೂಕಿನ ಬೈಲೂರು ಗ್ರಾಪಂ ವ್ಯಾಪ್ತಿಯ ಪ್ರಾಥಮಿಕ ಆರೋಗ್ಯ ಕೇಂದ್ರ ಮತ್ತು ಸಿಬ್ಬಂದಿ ವಸತಿ ಗೃಹ ಹಾಗೂ ಗ್ರಾಪಂದಲ್ಲಿಯ ಗ್ರಂಥಾಲಯ ಮತ್ತು ಸರಕಾರಿ ಮಾದರಿ ಕನ್ನಡ ಪ್ರಾಥಮಿಕ ಶಾಲಾ ಆವರಣದಲ್ಲಿಯ ನೂತನ ಅಂಗನವಾಡಿ ಹಾಗೂ ಶಾಲಾ ಕಟ್ಟಡಗಳನ್ನು ಅಧಿಕಾರಿ ತಂಡದೊಂದಿಗೆ ಭೇಟಿನೀಡಿ ವಿಕ್ಷೀಸಿ ಮಾತನಾಡಿ, ಆದಷ್ಟು ಬೇಗನೇ ಆರೋಗ್ಯ ಸಿಬ್ಬಂದಿ ವಸತಿ ಗೃಹ ಮತ್ತು ಶಾಲಾ ಮಕ್ಕಳಿಗೂ ಅನುಕೂಲ ಮಾಡಿಕೊಡಲಾಗುವುದೆಂದು ಹೇಳಿದರು.

ನಂತರ ಶಾಲಾ ಹಾಜರಾತಿ ಹಾಗೂ ಇನ್ನುಳಿದ ದಾಖಲೆಗಳನ್ನು ಪರಿಶೀಲಿಸಿದರು.

ಈ ವೇಳೆ ಕ್ಷೇತ್ರ ಪ್ರಭಾರಿ ಶಿಕ್ಷಣಾಧಿಕಾರಿ ಚನ್ನಬಸಪ್ಪ ತುಬಾಕಿ, ಸಿಡಿಪಿಓ ಅರುಣಕುಮಾರ, ತಾಪಂ ಜಿಪಂ ಅಭಿಯಂತರುಗಳಾದ ಆರ್ಬಿ ಖಾಮಾಪೂರ, ಆರ್.ಆರ್ ಬಡಿಗೇರ, ಗ್ರಾಪಂ ಸದಸ್ಯ ಸಂಗಮೇಶ ಹಿರೇಮಠ, ಗ್ರಾಪಂ ಕಾರ್ಯದರ್ಶಿ ಬಸವರಾಜ ಅಂಬಡಗಟ್ಟಿ, ಗ್ರಂಥಪಾಲಕ ಜಗದೀಶ ಅಂಗಡಿ, ಸುರೇಶ ಕುರಗುಂದ, ಶಿವಾನಂದ ಹಿರೇಮಠ, ಬೈಲೂರ ಕ್ಲಸ್ಟರ್ರ ಸಿಆರ್ಪಿ ಶಿಕ್ಷಕ ಸಂಜು ಹುಬ್ಬಳ್ಳಿ. ಶಾಲಾ ಪ್ರಧಾನಗುರು ನಾಗಪ್ಪ ಮಲಮೇತ್ರಿ ದೈಹಿಕ ಶಿಕ್ಷಕ ಅಶೋಕ ಹುಬ್ಬಳ್ಳಿ, ಶಿಕ್ಷಕ ಗುರುಶಾಂತಯ್ಯಾ ಹಿರೇಮಠ, ಸಹಶಿಕ್ಷಕರು, ಗ್ರಾಪಂ ಸಿಬ್ಬಂದಿ ಸುನೀಲ್ ಮತ್ತು ಶಶಿಧರ, ಗ್ರಾಮಸ್ಥರಿದ್ದರು.

# ಕ್ರಾಂತೀವೀರ ಸಂಗೊಳ್ಳಿ ರಾಯಣ್ಣಾ ಜಯಂತಿ ಆಚರಣೆ



**ಯಮಕನಮರಡಿ :** ಸಮಿಪದ ಹೆಬ್ಬಾಳ ಗ್ರಾಮಕ್ಕೆ ಕರ್ನಾಟಕ ಸರ್ಕಾರ ಲೋಕೋಪಯೋಗಿ ಇಲಾಖೆ ಸಚಿವರು ಹಾಗೂ ಬೆಳಗಾವಿ ಜಿಲ್ಲಾ ಉಸ್ತುವಾರಿ ಮಂತ್ರಿಗಳಾದ ಸತೀಶ್ ಅಣ್ಣಾ ಜಾರಕಿಹೊಳಿ ಅವರು ಯಮಕನಮರಡಿ ಮತಕ್ಷೇತ್ರದಲ್ಲಿ ಬರುವ ಹೆಬ್ಬಾಳ ಗ್ರಾಮದಲ್ಲಿ ದಿ. 15ರಂದು ಕ್ರಾಂತಿ ವೀರ ಸಂಗೊಳ್ಳಿ ರಾಯಣ್ಣ ಜಯಂತಿ ಉತ್ಸವ ಕಾರ್ಯಕ್ರಮದಲ್ಲಿ ಭಾಗವಹಿಸಿ ಶುಭಕೋರಿದರು. ದೇಶಕ್ಕಾಗಿ ತ್ಯಾಗ ಬಲಿದಾನ ಮಾಡಿರುವ ಮಹಾತ್ಮರನ್ನು ನಾವು ಸ್ಮರಿಸಬೇಕು ಈ ಕುರಿತು ಯುವಕರಿಗೂ ಮನವರಿಕೆ ಮಾಡಿಕೊಡಬೇಕೆಂದು ಹೇಳಿದರು.

ಚಿಕ್ಕೋಡಿ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ರಾಮ ಅಣ್ಣಾ ಗುಳ್ಳಿ ಯಮಕನಮರಡಿ ಮತಕ್ಷೇತ್ರದ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಮಾಹತೇಶ ಮಗದುಮ ಸಚಿವರ ಆಪ್ತ ಸಹಾಯಕ ರವಿ ಜೀಂಡ್ರಾಳಿ ಕಿರಣ್ ರಜಪೂತ ಬಸವರಾಜ ಜತ್ತಿ ಅಸಿಫ್ ಮುಲ್ಲಾ ಬೈರೇಗೌಡ ಪಾಟೀಲ್ ಗ್ರಾಮ ಪಂಚಾಯಿತಿ ಅಧ್ಯಕ್ಷರು ಉಪಾಧ್ಯಕ್ಷರು ಸದಸ್ಯರು ಯುವಕರು ಉಪಸ್ಥಿತರಿದ್ದರು.

# ಬೈಲಹೊಂಗಲನ ಅಂಗನವಾಡಿ ಕಾರ್ಯಕರ್ತೆ ಹಾಗೂ ಅಂಗನವಾಡಿ ಸಹಾಯಕಿಯರ ಹುದ್ದೆಗೆ ಅರ್ಜಿ ಆಹ್ವಾನದ ದಿನಾಂಕ ವಿಸ್ತರಣೆ

**ಬೆಳಗಾವಿ :** ಬೈಲಹೊಂಗಲ ತಾಲೂಕಿನಲ್ಲಿ ಖಾಲಿ ಇರುವ ಅಂಗನವಾಡಿ ಕಾರ್ಯಕರ್ತೆ–05 ಹಾಗೂ ಅಂಗನವಾಡಿ ಸಹಾಯಕಿಯರ–20 ಹುದ್ದೆಗಳಿಗೆ ಆನ್‌ಲೈನ್ ಮೂಲಕ ಮಹಿಳಾ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿತ್ತು.

ಸದರಿ ಅರ್ಜಿ ಸಲ್ಲಿಸಲು ಆಗಸ್ಟ್.04 ರವರೆಗೆ ಕೊನೆಯ ದಿನಾಂಕ ನಿಗದಿಪಡಿಸಲಾಗಿತ್ತು. ಆದ–ರೆ ತಾಂತ್ರಿಕ ಸಮಸ್ಯೆಯಿಂದಾಗಿ ಅರ್ಜಿ ಸಲ್ಲಿಸಲು ತೊಂದರೆ ಉಂಟಾಗಿದ್ದು, ಸದರಿ ಸಮಸ್ಯೆಗಳನ್ನು ಸರಿಪಡಿಸಿ ಆಗಸ್ಟ್.25 ರವರೆಗೆ ಅರ್ಜಿ ಸಲ್ಲಿಸುವ ದಿನಾಂಕವನ್ನು ವಿಸ್ತರಿಸಲಾಗಿದೆ ಎಂದು ಬೈಲಹೊಂಗಲನ ತಾಲೂಕಾ ಅಂಗನವಾಡಿ ಕಾರ್ಯಕರ್ತೆ ಹಾಗೂ ಅಂಗನವಾಡಿ ಸಹಾಯಕಯ ಅರ್ಜಿ ಪರಿಶೀಲನಾ ಸಮಿತಿ ಹಾಗೂ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಸದ್ಯಸ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಕ್ಕಳಿಗೆ ಪಾಠ ಮಾಡಿದ ಜಿಲ್ಲಾಧಿಕಾರಿ ಟಿ.ಭೂಬಾಲನ್

**ವಿಜಯಪುರ :** ಬುಧವಾರ ಜಿಲ್ಲಾಧಿಕಾರಿ ಟಿ. ಭೂಬಾಲನ್ ಅವರು ಟೆಕಡೆಗಲ್ಲಿಯಲ್ಲಿರುವ ಸರಕಾರಿ ಉರ್ದು ಶಾಲೆ ನಂ.5ಗೆ ಭೇಟಿ ನೀಡಿ ಮಕ್ಕಳ ಕಲಿಕಾ ಗುಣಮಟ್ಟವನ್ನು ಪರಿಶೀಲನೆ ನಡೆಸಿ, ಮಕ್ಕಳಿಗೆ ಪಾಠ ಬೋಧನೆ ಮಾಡಿದರು.

ಶಾಲೆಯ ಶಿಕ್ಷಕರಿಂದ ಶಾಲೆಯಲ್ಲಿ ಕುರಿತಾಗಿ ಮಾಹಿತಿ ಪಡೆದು–ಕೊಂಡ ಅವರು, ಮಕ್ಕಳಿಗೆ ಪಠ್ಯೇತೆರ ಚಟುವಟಿಕೆಗಳಲ್ಲಿ ಸಕ್ರೀಯವಾಗಿ ಭಾಗವಹಿಸುವಂತೆ ನೋಡಿಕೊಳ್ಳುವ ಮೂಲಕ ಮಕ್ಕಳ ಸರ್ವಾಂಗೀಣ ವ್ಯಕ್ತಿತ್ವದ ಬೆಳವಣಿಗೆಗೆ ಪೂರಕವಾಗಿ ಕಾಂರ್ುನಿರ್ವಹಿಸಬೇಕು. ಮಕ್ಕಳಿಗೆ ಶುಚಿತ್ವ, ಶಿಸ್ತು ಮತ್ತು ಅಧ್ಯಯನ ಮಹತ್ವದ ಬಗ್ಗೆ ತಿಳಿಸಿಕೊಡಬೇಕು ಎಂದು ಸೂಚಿಸಿದ ಅವರು ಶಾಲೆಯ ಹಲವು ಕಡತ ಮತ್ತು ವಹಿಗಳನ್ನು ಪರಿಶೀಲಿಸಿದರು.




ನಗರದ ಟೆಕಡೆಗಲ್ಲಿಯ ಅಂಗನವಾಡಿ ಕೇಂದ್ರಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ ಜಿಲ್ಲಾಧಿಕಾರಿಗಳು, ಆಹಾರದ ವೇಳಾಪಟ್ಟಿಯಂತೆ ಗುಣಮಟ್ಟದ ಆಹಾರ ವಿತರಿಸಲು ಕ್ರಮ ವಹಿಸಬೇಕು, ದಾಖಲಾತಿಗಳ ನಿರ್ವಹಣೆ, ಪಾಲಕರ ಸಭೆಯ ಮಾಹಿತಿ, ಆಗಾಗ ಕಡ್ಡಾಯವಾಗಿ ಸಭೆಗಳನ್ನು ಹಮ್ಮಿಕೊಂಡು ಇಲಾಖೆ ಯೋಜನೆಗಳ ಸ'ದ'ುಪ'ಂ'ೋಗ'ದ' ಬಗ್ಗೆ ಸಾರ್ವಜನಿಕರಿಗೆ ವಿವರವಾಗಿ ಮಾಹಿತಿಯನ್ನು ನೀಡಬೇಕು. ಮಕ್ಕಳ ಉತ್ತಮ ಬೆಳವಣಿಗೆಯಲ್ಲಿ ಅಂಗನವಾಡಿ ಕಾರ್ಯಕರ್ತೆಯರ ಪಾತ್ರ ಬಹ'ುವ'ುುಖ್ಯವಾಗಿದ' ಈ ದಿಶೆಯಲ್ಲಿ ಕಾಂರ್ುನಿರ್ವಹಿಸಬೇಕು ಎಂದು ಹೇಳಿದರು.

ಮಕ್ಕಳಿಂದ ಶಾಲಾ ಪೂರ್ವ ಶಿಕ್ಷಣಕ್ಕೆ ಸಂಬಂಧಿಸಿದಂತೆ, ಹಾಡು ಮತ್ತು ಅಭಿನಯ ಗೀತೆಯನ್ನು ಕೇಳಿದರು. ಈ ಸಂದರ್ಭದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕರಾದ ಕೆ.ಕೆ. ಚವ್ಹಾಣ ಸೇರಿದಂತೆ ಶಿಕ್ಷಕರು, ಅಧಿಕಾರಿ, ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

# ಭಾರಿ ಮಳೆಯಿಂದಾಗಿ ಗ್ರಾಮಕ್ಕೆ ನುಗ್ಗಿದ ನೀರು: ಡಿ.ಸಿ. ನಲೀನ್ ಅತುಲ್ ಅವರಿಂದ ಪರಿಶೀಲನೆ



**ಕೊಪ್ಪಳ :** ಜಿಲ್ಲಾಧಿಕಾರಿಗಳಾದ ನಲಿನ್ ಅತುಲ್ ಅವರು ಆಗಸ್ಟ್ 17ರಂದು ಕುಷ್ಟಗಿ ತಾಲೂಕಿನ ಟೆ–ಂಗುಂಟಿ ಗ್ರಾಮಕ್ಕೆ ಭೇಟಿ ನೀಡಿದರು.

ಕೊಪ್ಪಳ ಜಿಲ್ಲೆಯಲ್ಲಿ ಆಗಸ್ಟ್ 16ರ ರಾತ್ರಿ ಸುರಿದ ಭಾರಿ ಮಳೆಯಿಂದಾಗಿ ಕುಷ್ಟಗಿ ಹೋಬಳಿಯ ಟೆ–ಂಗಂಟಿ ಗ್ರಾಮಕ್ಕೆ ಹೊಂದಿಕೊಂಡಿರುವ ಹಳ್ಳವು ತುಂಬಿ ಗ್ರಾಮಕ್ಕೆ ನುಗ್ಗಿ ಹಾನಿಯಾದ ಬಗ್ಗೆ ಇದೆ ವೇಳೆ ತಾಲೂಕಿನ ತಹಸೀಲ್ದಾರರು ಮತ್ತು ಗ್ರಾಮ ಪಂಚಾಯತ್ ಪಿಡಿಓ ಅವರು ಜಿಲ್ಲಾಧಿಕಾರಿಗಳಿಗೆ ಮಾಹಿತಿ ನೀಡಿದರು. ಮಳೆಯಿಂದಾದ ಹಾನಿಗೆ ಸೂಕ್ತ ಪರಿಹಾರ ಕಲ್ಪಿಸಿಕೊಡಬೇಕು ಎಂದು ಇದೆ ವೇಳೆ ಗ್ರಾಮಸ್ಥರು ಜಿಲ್ಲಾಧಿಕಾರಿಗಳಲ್ಲಿ ಮನವಿ ಮಾಡಿದರು.

ಮಳೆಯಿಂದಾಗಿ ಹಾನಿ ಅನುಭವಿಸಿದ ಸಂತ್ರಸ್ಥರಿಗೆ ಸೂಕ್ತ ಪರಿಹಾರ ಕಲ್ಪಿಸಿಕೊಡಲು ಕೂಡಲೇ ಅಗತ್ಯ ಕ್ರಮ ಜರುಗಿಸಬೇಕು ಎಂದು ಜಿಲ್ಲಾಧಿಕಾರಿಗಳು, ಕುಷ್ಟಗಿ ತಹಸೀಲ್ದಾರರಾದ ಅಶೋಕ ಶಿಗ್ಗಾಂವಿ ಅವರಿಗೆ ನಿರ್ದೇಶನ ನೀಡಿದರು. ಮಳೆಯಿಂದ ಹಾನಿ ಅನುಭವಿಸಿದ ಸಂತ್ರಸ್ಥರಿಗೆ ಕೂಡಲೇ ಕಾಳಜಿ ಕೇಂದ್ರ ತೆರೆದು ಅವರಿಗೆ ಉಪಹಾರ ಮತ್ತು ಊಟದ ವ್ಯವಸ್ಥೆಯನ್ನು ಮಾಡಿಸಲು ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು.

ಅಂದಾಜು ಪಟ್ಟಿ ತಯಾರಿಸಲು ಸೂಚನೆ: ಮಳೆ ಜೋರಾಗಿ ಸುರಿದಾಗೊಮ್ಮೆ ಹಳ್ಳವು ತುಂಬಿ ಹರಿದು ಈ ರೀತಿ ತೊಂದರೆಯಾಗುತ್ತಿದೆ. ಇದ–ಕ್ಕೆ ಶಾಶ್ವತ ಪರಿಹಾರ ಕಲ್ಪಿಸಬೇಕು. ಹಳ್ಳದ ನೀರು ಗ್ರಾಮಕ್ಕೆ ನುಗ್ಗದಂತೆ ತಡೆಗೋಡೆ ನಿರ್ಮಿಸುವುದು ಅತೀ ಅವಶ್ಯಕವಾಗಿದೆ ಎಂದು ಇದೆ ವೇಳೆ ಗ್ರಾಮಸ್ಥರು ಜಿಲ್ಲಾಧಿಕಾರಿಗಳಲ್ಲಿ ಮನವಿ ಮಾಡಿದರು. ಗ್ರಾಮಸ್ಥರ ಮನವಿಯಂತೆ ಟೆಂಗುಂಟಿ ಗ್ರಾಮದಲ್ಲಿರುವ ಹಳ್ಳಕ್ಕೆ ತಡೆಗೋಡೆ ನಿರ್ಮಿಸುವ ಕುರಿತು ಅಂದಾಜು ವೆಚ್ಚದ ಪಟ್ಟಿಯನ್ನು ತಯಾರಿಸಿ ಪ್ರಸ್ತಾವನೆಯನ್ನು ಕೂಡಲೇ ಸಿದ್ಧಪಡಿಸಿ ಸಲ್ಲಿಸಲು ಅಗತ್ಯಕ್ರಮ ವಹಿಸಬೇಕು ಎಂದು ತಹಸೀಲ್ದಾರರಿಗೆ ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು.

**ಚೆಕ್ ಡ್ಯಾಮಗೆ ಭೇಟಿ:**

ಟೆಂಗುಂಟಿ ಗ್ರಾಮಕ್ಕೆ ಭೇಟಿ ನೀಡಿದ ವೇಳೆಯಲ್ಲಿ ಜಿಲ್ಲಾಧಿಕಾರಿಗಳು, ಗ್ರಾಮದಲ್ಲಿನ ಚೆಕ್ ಡ್ಯಾಮ್ ವೀಕ್ಷಣೆ ನಡೆಸಿದರು. ಈ ಘಟನೆ ಹಿನ್ನೆಲೆಯಲ್ಲಿ ಕೇಂದ್ರ ಸ್ಥಾನದಲ್ಲಿದ್ದು ಕಾರ್ಯ ನಿರ್ವಹಿಸುವಂತೆ ಇದೆ ವೇಳೆ ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು ಸೇರಿದಂತೆ ಇನ್ನಿತರ ಅಧಿಕಾರಿಗಳು ಮತ್ತು ಸಿಬ್ಬಂದಿಗೆ ಜಿಲ್ಲಾಧಿಕಾರಿಗಳು ನಿರ್ದೇಶನ ನೀಡಿದರು.

# ತುಂಗಭದ್ರಾ ಜಲಾಶಯಕ್ಕೆ ಪ್ರವಾಸೋದ್ಯಮ ಸಚಿವರ ಭೇಟಿ: ಸ್ಟಾಪಲಾಗ್ ಅಳವಡಿಕೆ ಕಾರ್ಯ ವೀಕ್ಷಣೆ

**ಕೊಪ್ಪಳ :** ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು ಮತ್ತು ಪ್ರವಾಸೋದ್ಯಮ ಇಲಾಖೆ ಸಚಿವರಾದ ಹೆಚ್.ಕೆ ಪಾಟೀಲ್ ಅವರು ಆಗಸ್ಟ್ 16ರಂದು ತುಂಗಭದ್ರಾ ಜಲಾಶಯಕ್ಕೆ ಭೇಟಿ ನೀಡಿದರು.

ಟಿ.ಬಿ.ಡ್ಯಾಮನ ಗೇಟ್ ನಂ.19ರ ಚೈನ್ ಲಿಂಕ್ ಕಡಿತವಾಗಿ ಗೇಟ್ ದುರಸ್ತಿ ಹಿನ್ನೆಲೆಯಲ್ಲಿ ನದಿಗೆ ನೀರು ಬಿಟ್ಟಿರುವುದನ್ನು ಸಚಿವರು ಇದೆ ವೇಳೆ ವೀಕ್ಷಣೆ ನಡೆಸಿದರು. ಬಳಿಕ ಡ್ಯಾಮನ್ ನಂ.19ರ ಗೇಟ್‌ಗೆ ಸ್ಟಾಪಲಾಗ್ ಅಳವಡಿಕೆ ಕಾರ್ಯದ ಬಗ್ಗೆ ಮಾಹಿತಿ ಪಡೆದರು.

ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಸಚಿವರು, ಬಹಳ ದೊಡ್ಡ ಪ್ರದೇಶಕ್ಕೆ ನೀರಾವರಿ ಯೋಜನೆ ಹೊಂದಿರುವಂತಹ ಮತ್ತು ಕುಡಿಯುವ ನೀರಿನ ವ್ಯವಸ್ಥೆ ಹೊಂದಿದ ಒಂದು ಅಧ್ಭುತವಾದ ಸೃಷ್ಟಿ ತುಂಗಭದ್ರಾ ಜಲಾಶಯವಾಗಿದೆ. ಆದರೆ ಏನೋ ದುರ್ದೈವ ಆಕಸ್ಮಿಕ ಘಟನೆಯಿಂದಾಗಿ ಜಲಾಶಯದ ಕ್ರಸ್ಟ್ ಗೇಟ್ 19ರ ಚೈನ್ ಲಿಂಕ್ ಕಟ್ಟಾದ ಹಿನ್ನಲೆಯಲ್ಲಿ ನೀರು ತುಂಬಾ ರಭಸವಾಗಿ ನೀರು ಹರಿಯುತ್ತಿರುವುದರಿಂದ ಸುಮಾರು 30 ಟಿಎಂಸಿ ನೀರು ಹರಿದು ಹೋಗಿದೆ. ಸ್ಟಾಪ್ ಲಾಗ್ ಗೇಟನ್ನು ಅಳವಡಿಸಲು ಸತತ ಪ್ರಯತ್ನಗಳು ನೆಡಿದಿದ್ದು, ಕರ್ನಾಟಕದ ಜಲ ಸಂಪನ್ಮೂಲ ಇಲಾಖೆಯ ಪ್ರಧಾನ ಕಾರ್ಯದರ್ಶಿ ಮತ್ತು ಇಂಜೀನಿಯರಗಳ ತಂಡ ಸ್ಥಳದಲ್ಲಿಯೇ ಇದ್ದಾರೆ.




ಕೊಪ್ಪಳ ಜಿಲ್ಲೆಯ ಉಸ್ತುವಾರಿ ಸಚಿವರು ಹಾಗೂ ವಿಜಯನಗರ ಜಿಲ್ಲಾ ಉಸ್ತುವಾರಿ ಸಚಿವರು ಪ್ರತಿ ಹಂತದ ಕಾರ್ಯಚರಣೆ ಮೇಲ್ವಿಚಾರಣೆ ಮಾಡುತ್ತಿದ್ದಾರೆ.

ಒಂದು ಸ್ಟಾಪ್ ಲಾಗ್ ಗೇಟ್ ಅಳವಡಿಕೆ ಕಾರ್ಯ ಯಶಸ್ವಿಯಾಗಿದ್ದು, ಇನ್ನೂ ಎರಡು ಸ್ಟಾಪ್ ಲಾಗ್ ಗೇಟ್ ಗಳಿಗಾಗಿ ಜೆ.ಎಸ್.ಡಬ್ಲೂ
ನಿಂದ ಉಳಿದ ಭಾಗಗಳು ಬರುತ್ತವೆ. ಇನ್ನೂ ಎರಡು ದಿನಗಳಲ್ಲಿ ಅವುಗಳನ್ನು ಯಶಸ್ವಿಯಾಗಿ ಜೋಡಣೆಗೊಂಡ–ರೆ ಉತ್ತಮ ಸುದ್ದಿ ಸಿಗಲಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಮುಖಂಡರಾದ ಅಮರೇಗೌಡ ಪಾಟೀಲ ಬಯ್ಯಾಪೂರ, ಜನಾರ್ಧನ ಹುಲಿಗಿ, ಗಣ್ಯರಾದ ಕೆ.ಕಾಳಪ್ಪ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

# ಅಂಚೆ ಇಲಾಖೆಯಿಂದ ದೀನ ದಯಾಳ ಸ್ಪರ್ಷ ಯೋಜನೆಯಡಿ ಅರ್ಜಿ ಆಹ್ವಾನ

**ವಿಜಯಪುರ :** ಅಂಚೆ ಇಲಾಖೆಯಿಂದ 6ರಿಂದ 9ನೇ ತರಗತಿ ವಿದ್ಯಾರ್ಥಿಗಳಿಗೆ ಅಂಚೆ ಚೀಟಿಗಳ ಸಂಗ್ರಹ ಉತ್ತೇಜಿಸಲು ದೀನ್ ದಯಾಳ ಸ್ಪರ್ಷ ಯೋಜನೆಯಡಿ ಅರ್ಜಿ ಆಹ್ವಾನಿಸಲಾಗಿದೆ.

ಈ ಯೋಜನೆಯಡಿ ಅಂಚೆ ಚೀಟಿಗಳ ಮೌಲ್ಯ ಮತ್ತು ಸಂಶೋಧನೆಯ ಕುರಿತಾದ ಹವ್ಯಾಸವನ್ನು ಬೆಳೆಸಲು ವಿದ್ಯಾರ್ಥಿವೇತನ ನೀಡಲಾಗುವುದು. ಚಿಕ್ಕ ವಯಸ್ಸಿನಲ್ಲಿ ಮಕ್ಕಳಲ್ಲಿ ಅಂಚೆ ಚೀಟಿಗಳ ಸಂಗ್ರಹ ಉತ್ತೇಜನೆ ವಿದ್ಯಾರ್ಥಿವೇತನದ ಉದ್ದೇಶವಾಗಿದೆ. ಈ ಯೋಜನೆಯಡಿ ಅರ್ಜಿ ಸಲ್ಲಿಸುವ 6 ರಿಂದ 9ನೇ ತರಗತಿ ವಿದ್ಯಾರ್ಥಿಗಳು 2023–24ನೇ ಸಾಲಿನ ಶೈಕ್ಷಣಿಕ ವರ್ಷದಲ್ಲಿ ಶೆ.60 ರಷ್ಟು ಅಂಕ ಪಡೆದಿರಬೇಕು ಮತ್ತು ಅಂಚೆ ಚೀಟಿಗಳ ಠೇವಣಿ ಖಾತೆಯನ್ನು ಅಥವಾ ಅಂಚೆ ಚೀಟಿಗಳ ಕ್ಲಬ್‌ನಲ್ಲಿ ಸದಸ್ಯರಾಗಿರಬೇಕು.

ಅಂಚೆ ಚೀಟಿಗಳ ಸಂಗ್ರಹದ ರಸಪ್ರಶ್ನೆ ಆಧಾರದ ಮೇಲೆ ವಿದ್ಯಾರ್ಥಿಗಳನ್ನು ಆಯ್ಕೆ ಮಾಡಲಾಗುತ್ತಿದ್ದು, ಆಯ್ಕೆಯಾದ ವಿದ್ಯಾರ್ಥಿಗಳಿಗೆ ಪ್ರತಿ ವರ್ಷ 6 ಸಾವಿರ ರೂ. ವಿದ್ಯಾರ್ಥಿವೇತನ ನೀಡಲಾಗುತ್ತದೆ.

ಅರ್ಜಿ ಸಲ್ಲಿಸಲು ದಿನಾಂಕ : 03–09–2024 ಕೊನೆಯ ದಿನಾಂಕವಾಗಿದ್ದು, ಈ ಕುರಿತಂತೆ ಹೆಚ್ಚಿನ ಮಾಹಿತಿಗಾಗಿ ಇಲಾಖೆಯ ಅಂತರ್ಜಾಲಗಳಾದ www.indiapost.govin and www.karna-takapost.gov.inಮತ್ತುದೂ:08352–250265, 253000, ಮೊ: 9945457976, 7019494849 ಸಂಖ್ಯೆಗೆ ಸಂಪರ್ಕಿಸಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.

## ಜಿಲ್ಲೆಯ ಆದ್ಯತಾ ಪ್ರವಾಸಿ ತಾಣಗಳ ಆಯ್ಕೆಗೆ ವೋಟ್ ಮಾಡಿ

**ಕೊಪ್ಪಳ :** "ದೇಖೋ ಅಪ್ನಾ ದೇಶ್ ಪೀಪಲ್ಸ್ ಚಾಯ್ಸ್-2024" ಕಾರ್ಯಕ್ರಮದಡಿ ಕೊಪ್ಪಳ ಜಿಲ್ಲೆಯ ಪ್ರವಾಸಿ ತಾಣಗಳನ್ನು ಆದ್ಯತಾ ಪ್ರವಾಸಿ ತಾಣಗಳನ್ನಾಗಿ ಆಯ್ಕೆಗಾಗಿ ವೋಟ್ ಮಾಡುವಂತೆ ಕೊಪ್ಪಳ ಜಿಲ್ಲಾ ಪ್ರವಾಸೋದ್ಯಮ ಇಲಾಖೆ ಸಹಾಯಕ ನಿರ್ದೇಶಕರು ತಿಳಿಸಿದ್ದಾರೆ.

ಈ ಕಾರ್ಯಕ್ರಮ ಸಂಬಂಧ ಜಿಲ್ಲಾ ಮಟ್ಟದಲ್ಲಿ ಪ್ರಚಾರ ಕೈಗೊಳ್ಳುವ ಸಂಬಂಧ ಕರುನಾಡಿನ ಕೊಪ್ಪಳ ಜಿಲ್ಲೆಯ ಪ್ರವಾಸಿ ಸ್ಥಳಗಳನ್ನು ಮೇಲ್ದರ್ಜೆಗೇರಿಸಲು ಮತ್ತು ಹೆಚ್ಚೆಚ್ಚು ಪ್ರವಾಸಿಗರನ್ನು ಆಕರ್ಷಿಸಲು ಧಾರ್ಮಿಕ, ಸಾಂಸ್ಕೃತಿಕ ಪರಂಪಾರಿಕ ನೈಸರ್ಗಿಕ ವನ್ಯಜೀವಿಗಳು ಜಲಪಾತಗಳು ಸಾಹಸ ಪರಿಸರ ಹಾಗೂ ಇತರೆ ಪ್ರವಾಸಿ ತಾಣಗಳಲ್ಲಿ ಪ್ರವಾಸೋದ್ಯಮವನ್ನು ಉತ್ತೇಜನ ನೀಡಿ ಪ್ರಮುಖ ಪ್ರವಾಸಿ ತಾಣಗಳನ್ನು ಗುರುತಿಸಿ ವಿಶ್ವ ದರ್ಜೆಗೇರಿಸಲು ಅಭಿವೃದ್ಧಿ ಪಡಿಸಲು ಕೇಂದ್ರ ಪ್ರವಾಸೋದ್ಯಮ ಸಚಿವಾಲಯದಿಂದ "ದೇಖೋ ಅಪ್ನಾ ದೇಶ್ ಪೀಪಲ್ಸ್ ಚಾಯ್ಸ್-2024" ಎಂಬ ಶಿರೋನಾಮೆಯಲ್ಲಿ ಕಾರ್ಯಕ್ರಮವನ್ನು ಪ್ರಾರಂಭಿಸಲಾಗಿದೆ.

ಈ ಕಾರ್ಯಕ್ರಮದ ಭಾಗವಾಗಿ ಯುವಕರು, ಹಿರಿಯ ನಾಗರೀಕರು ಹಾಗೂ ಪ್ರವಾಸಿಗರು ಕೊಪ್ಪಳ ಜಿಲ್ಲೆಯ ಪ್ರವಾಸಿ ತಾಣಗಳನ್ನು ಆಯ್ಕೆಗೊಳಿಸಲು ಜಿಲ್ಲೆಯ ಎಲ್ಲಾ ಶಾಲಾ ಕಾಲೇಜು, ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ಜಿಲ್ಲೆಯ ಪ್ರವಾಸಿ ತಾಣಗಳಾದ ಆನೆಗುಂದಿ ಕೋಟೆ, ಅಂಜನಾದ್ರಿ ಬೆಟ್ಟ, ಗವಿಮಠ, ಹುಲಿಗೆಮ್ಮ ದೇವಿ ದೇವಸ್ಥಾನ, ಹುಲಿಕೆರೆ, ಕಬ್ಬರಗಿ ಫಾಲ್ಸ್, ಕನಕಾಚಲಪತಿ ದೇವಸ್ಥಾನ, ಕಿನ್ನಾಳ ಕಲೆ, ಕುಕನೂರು ಮಹಾಮಾಯ ದೇವಸ್ಥಾನ, ನವಬೃಂದಾವನ ಮತ್ತು ಪಂಪಾಸರೋವರ ಈ ತಾಣಗಳಿಗೆ https://innovateindia.mygov.in/dekho-apna-desh/ ಲಿಂಕ್‌ನಲ್ಲಿ 2024ರ ಸೆಪ್ಟಂಬರ್ 15 ರೊಳಗಾಗಿ ವೋಟ್ ಮಾಡುವಂತೆ ಪ್ರಕಟಣೆ ತಿಳಿಸಿದೆ.

## ವಿಕಲಚೇತನ ವಿದ್ಯಾರ್ಥಿಗಳಿಗೆ ನ್ಯಾಷನಲ್ ಇ-ಸ್ಕಾಲರ್‌ಶಿಪ್: ಅರ್ಜಿ ಆಹ್ವಾನ

**ಕೊಪ್ಪಳ :** ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯಿಂದ 2024-25ನೇ ಸಾಲಿನ ಕೇಂದ್ರ ಸರ್ಕಾರದ ನ್ಯಾಷನಲ್ ಇ-ಸ್ಕಾಲರ್‌ಶಿಪ್ ಯೋಜನೆಯಡಿ ವಿದ್ಯಾರ್ಥಿವೇತನಕ್ಕಾಗಿ ಅರ್ಹ ವಿಕಲಚೇತನ ವಿದ್ಯಾರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಮೆಟ್ರಿಕ್ ಪೂರ್ವ ವಿದ್ಯಾರ್ಥಿ ವೇತನಕ್ಕೆ ಅರ್ಜಿ ಸಲ್ಲಿಸಲು ಆಗಸ್ಟ್ 31 ಕೊನೆಯ ದಿನವಾಗಿದೆ ಮತ್ತು ಮೆಟ್ರಿಕ್ ನಂತರ ವಿದ್ಯಾರ್ಥಿ ವೇತನ ಹಾಗೂ ಉನ್ನತ ತರಗತಿ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಲು ಅಕ್ಟೋಬರ್ 31 ಕೊನೆಯ ದಿನವಾಗಿದ್ದು, ಅರ್ಹ ವಿಕಲಚೇತನ ವಿದ್ಯಾರ್ಥಿಗಳು ಅರ್ಜಿಯನ್ನು ವೆಬ್‌ಸೈಟ್ https.scholarships.gov.in ರಲ್ಲಿ ಭರ್ತಿ ಮಾಡಿ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ತಾಲೂಕ ಎಂ.ಆರ್.ಡಬ್ಲ್ಯೂಗಳಾದ ಕೊಪ್ಪಳದ ಜಯಶ್ರೀ ಮೊ.ಸಂ: 9980126391, ಯಲಬುರ್ಗಾ/ಕುಕನೂರು ಬಸವರಾಜ ಮೊ.ಸಂ: 9591923910, ಕುಷ್ಟಗಿಯ ಚಂದ್ರಶೇಕರ ಮೊ.ಸಂ: 9916308585, ಗಂಗಾವತಿ, ಕನಕಗಿರಿ, ಕಾರಟಗಿ ಮಂಜುಳಾ ಮೊ.ಸಂ: 7975398202, ಇವರನ್ನು ಅಥವಾ ಗ್ರಾಮ ಪಂಚಾಯತಿಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ವಿ.ಆರ್.ಡಬ್ಲ್ಯೂ ನಗರಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯತಿಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಯು.ಆರ್.ಡಬ್ಲ್ಯೂಗಳನ್ನು ಹಾಗೂ ಕಚೇರಿಯ ದೂರವಾಣಿ ಸಂಖ್ಯೆ: 08539-295496 ಗೆ ಸಂಪರ್ಕಿಸಬಹುದು ಎಂದು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರಾಜ್ಯಪಾಲರ ಕ್ರಮ ಸರಿ: ಜೋಶಿ



**ಹುಬ್ಬಳ್ಳಿ :** ಸಿಎಂ ಸಿದ್ದರಾಮಯ್ಯ ಮೇಲೆ ಪ್ರಾಸಿಕ್ಯೂಷನ್ ಅನುಮತಿ ಕೊಡಲು ರಾಜ್ಯಪಾಲರು ಸಮಯಾವಕಾಶ, ತಜ್ಞರ ಸಲಹೆ ಪಡೆದು ಸಮಗ್ರ ತನಿಖೆಗೆ ಅನುಮತಿ ಕೊಟ್ಟಿದ್ದಾರೆ. ರಾಜ್ಯಪಾಲರ ಈ ಕ್ರಮ ಸರಿಯಾಗಿದೆ ಎಂದು ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಹೇಳಿದರು.

ನಗರದಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯಪಾಲರ ಈ ಕ್ರಮ ಸಾರ್ವಜನಿಕ ಜೀವನದಲ್ಲಿರುವ ಯಾವುದೇ ವ್ಯಕ್ತಿ ಶುದ್ಧತೆ ಕಾಪಾಡಿಕೊಳ್ಳುವುದಕ್ಕೆ ಬಹುದೊಡ್ಡ ಹೆಜ್ಜೆಯಾಗಿದೆ. ಯಾರೇ ಇದ್ದರೂ ಸಹ ಉನ್ನತ ಸ್ಥಾನದಲ್ಲಿದ್ದವರ ಮೇಲೆ ಆರೋಪ ಬಂದಾಗ ತನಿಖೆ ಹಾಗೂ ಕ್ರಮಗಳಾಗಬೇಕು. ಸಾರ್ವಜನಿಕ ಜೀವನದಲ್ಲಿದ್ದವರು ಭ್ರಷ್ಟಾಚಾರ ಅಥವಾ ತಪ್ಪು ಮಾಡಬೇಕಾದರೆ ಭಯ ಇರಬೇಕು. ರಾಜ್ಯಪಾಲರು ಅಳೆದು ತೂಗಿ ಪ್ರಾಸಿಕ್ಯೂಷನ್‌ಗೆ ಅನುಮತಿ ಕೊಟ್ಟಿದ್ದಾರೆ. ಸಿಎಂ ಸಿದ್ದರಾಮಯ್ಯ ತನಿಖೆಗೆ ಸಂಪೂರ್ಣ ಸಹಕಾರ ಕೊಡುತ್ತಾರೆಂದು ಭಾವಿಸಿದ್ದೇನೆ. ಏಕೆಂದರೆ ಸಿದ್ದರಾಮಯ್ಯ ತಾವು ಸ್ವಚ್ಛ ಹಾಗೂ ತೆರೆದ ಪುಸ್ತಕದಂತಿದ್ದೇನೆ ಎಂದು ಹೇಳುತ್ತಿದ್ದಾರೆ. ಅವರು ತಪ್ಪು ಮಾಡಿಲ್ಲ ಎಂದರೆ ಏನೂ ಭಯಪಡುವ ಅವಶ್ಯಕತೆ ಇಲ್ಲ. ತನಿಖೆಗೆ ಅಡೆತಡೆ ಮಾಡದೇ ಸಹಕಾರ ನೀಡಬೇಕೆಂದರು.

ಸಿದ್ದರಾಮಯ್ಯ ಕಾನೂನು ಹೋರಾಟ ಮಾಡಲು ಸ್ವತಂತ್ರವಿದ್ದಾರೆ. ಇದಕ್ಕೆ ನಮ್ಮ ತಕರಾರು ಇಲ್ಲ. ಕಾನೂನು ಹೋರಾಟದ ನೆಪವಿಟ್ಟುಕೊಂಡು ತನಿಖೆಗೆ ಅಡ್ಡಿಪಡಿಸುವ ಕೆಲಸ ಮಾಡಬಾರದು ಎಂದರು.

ಯಾವುದೇ ಕಾರಣಕ್ಕೂ ಬಿಜೆಪಿ ರಾಜ್ಯದಲ್ಲಿನ ಕಾಂಗ್ರೆಸ್ ಸರ್ಕಾರವನ್ನು ಬೀಳಿಸುವ, ಅಸ್ಥಿರಗೊಳಿಸುವ ಕೆಲಸ ಮಾಡುವುದಿಲ್ಲ. ಐದು ವರ್ಷ ಅಧಿಕಾರ ನಡೆಸಲು ಜನರು ಜನಾದೇಶ ಕೊಟ್ಟಿದ್ದಾರೆ. ಅವರು ಐದು ವರ್ಷ ಸಂಪೂರ್ಣ ಅಧಿಕಾರ ನಡೆಸಲಿ ಎಂಬುದೇ ನಮ್ಮ ಆಶಯ ಎಂದರು.

ಬಿಜೆಪಿಯಲ್ಲಿ ಯಾವುದೇ ಆಂತರಿಕ ಬೇಗುದಿಯಿಲ್ಲ. ಬಸನಗೌಡಪಾಟೀಲ್ ಯತ್ನಾಳ ಅವರೇ ಈ ಬಗ್ಗೆ ಪ್ರತಿಕ್ರಿಯೆ ನೀಡಿ ಅಸಮಾಧಾನ ಇಲ್ಲ ಎಂದು ಹೇಳಿದ್ದಾರೆ. ಹೀಗಾಗಿ ಈ ಬಗ್ಗೆ ಹೆಚ್ಚು ಹೇಳುವುದಿಲ್ಲ ಎಂದರು.

# ಸಿಎಂ ರಾಜೀನಾಮೆ ನೀಡಲಿ



**ಹುಬ್ಬಳ್ಳಿ :** ಮುಡಾ ಹಗರಣದಲ್ಲಿ ಸಿಎಂ ಸಿದ್ದರಾಮಯ್ಯ ವಿರುದ್ಧ ಪ್ರಾಸಿಕ್ಯೂಷನ್‌ಗೆ ರಾಜ್ಯಪಾಲರು ಅನುಮತಿ ನೀಡಿದ್ದಾರೆ. ಇದು ಕಾನೂನು ಬದ್ಧವಾದ ಅನುಮತಿಯಾಗಿದೆ. ಹೀಗಾಗಿ ಸಿದ್ದರಾಮಯ್ಯ ಅವರು ನೈತಿಕ ಹೊಣೆ ಹೊತ್ತು ರಾಜೀನಾಮೆ ನೀಡಬೇಕೆಂದು ಮಾಜಿ ಸಿಎಂ ಹಾಗೂ ಸಂಸದ ಜಗದೀಶ್ ಶೆಟ್ಟರ್ ಆಗ್ರಹಿಸಿದ್ದಾರೆ.

ನಗರದಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮುಡಾ ಹಗರಣ ಹಾಗೂ ವಾಲ್ಮೀಕಿ ಅಭಿವೃದ್ಧಿ ನಿಗಮದ ಹಗರಣ ವಿರುದ್ಧ ಬಿಜೆಪಿ ಹೋರಾಟ ಮಾಡುತ್ತಲೇ ಬರುತ್ತಿದೆ. ಸಿಎಂ ರಾಜೀನಾಮೆ ಕೊಡಬೇಕು. ತನಿಖೆಯನ್ನು ಸಿಬಿಐಗೆ ಒಪ್ಪಿಸಬೇಕೆಂದು ಆಗ್ರಹ ಮಾಡಿದ್ದೇವೆ ಎಂದರು.

ಮುಡಾ ಹಗರಣದಲ್ಲಿ ಸಿಎಂ ಸಿದ್ದರಾಮಯ್ಯ ತಮ್ಮ ಪತ್ನಿ ಹೆಸರಿನಲ್ಲಿ 14 ಸೈಟ್‌ಗಳನ್ನು ಪಡೆದುಕೊಂಡಿದ್ದಾರೆ. ಈ ಬಗ್ಗೆ ದಾಖಲೆಗಳಿವೆ. ಕಾನೂನು ಉಲ್ಲಂಘನೆಯಾಗಿರುವುದು ಸ್ಪಷ್ಟವಾಗಿದೆ. ರಾಜ್ಯದ ಸಿಎಂ ಜವಾಬ್ದಾರಿ ಹುದ್ದೆಯಲ್ಲಿದ್ದರೂ ಈ ರೀತಿಯಾಗಿ ನಡೆದುಕೊಂಡಿದ್ದು ಅವರಿಗೆ ಶೋಭೆಯಲ್ಲ. ಕಾನೂನು ಬಾಹೀರವಾಗಿ ನಡೆದುಕೊಂಡಿದ್ದರೆ ಕ್ರಮ ಕೈಗೊಳ್ಳಬೇಕು. ಆ ಹಿನ್ನೆಲೆ ರಾಜ್ಯಪಾಲರು ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿದ್ದಾರೆ ಎಂದು ಹೇಳಿದರು.

ಇದೀಗ ರಾಜ್ಯಪಾಲರ ನಿರ್ಧಾರವನ್ನು ಚಾಲೆಂಜ್ ಮಾಡುವುದು ಸಿಎಂ ಸಿದ್ದರಾಮಯ್ಯ ಹಾಗೂ ಕಾಂಗ್ರೆಸ್ ಪಕ್ಷಕ್ಕೆ ಬಿಟ್ಟ ವಿಚಾರ. ಆದರೆ ರಾಜ್ಯಪಾಲರ ನಿರ್ಧಾರ ಪ್ರಶ್ನೆ ಮಾಡುವುದು ಸರಿಯಲ್ಲ ಎಂದರು. ರಾಜ್ಯಪಾಲರು ಕೇಂದ್ರ ಸರ್ಕಾರ ಕೈಗೊಂಬೆಯಾಗಿ ಕೆಲಸ ಮಾಡುತ್ತಿದ್ದಾರೆ ಎಂಬ ಹೇಳಿಕೆ ವಿಚಾರವಾಗಿ ಪ್ರತಿಕ್ರಿಯಿಸಿ, ಈ ಹಿಂದೆ ಭಾರದ್ವಾಜ್ ಅವರು ರಾಜ್ಯಪಾಲರಾಗಿದ್ದಾಗ ಯಡಿಯೂರಪ್ಪ ಅವರ ವಿರುದ್ಧ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಲಾಗಿತ್ತು. ಆಗ ಕೇಂದ್ರದಲ್ಲಿ ಯುಪಿಎ ಸರ್ಕಾರ ಇತ್ತು. ಹೀಗಾಗಿ ರಾಜ್ಯಪಾಲರು ಅಗತ್ಯವಾದ ಕ್ರಮ ಕೈಗೊಳ್ಳುತ್ತಾರೆ. ಇದನ್ನು ರಾಜಕೀಕರಣಗೊಳಿಸುವುದು ಸರಿಯಲ್ಲ ಎಂದು ಹೇಳಿದರು.

ಆರ್ಕಾವತಿ ಹಗರಣದಲ್ಲಿಯೇ ಸಿದ್ದರಾಮಯ್ಯ ಸಿಎಂ ಹುದ್ದೆಗೆ ರಾಜೀನಾಮೆ ಕೊಡಬೇಕಿತ್ತು. ನ್ಯಾಯಮೂರ್ತಿ ಕೆಂಪಣ್ಣ ಆಯೋಗ ವರದಿ ನೀಡಿದೆ. ಆದರೆ ಈವರೆಗೆ ವರದಿ ಬಹಿರಂಗವಾಗಿಲ್ಲ. ಸಿದ್ದರಾಮಯ್ಯ ಸದನದಲ್ಲಿ ವರದಿ ಬಹಿರಂಗಗೊಳಿಸಿ ತಾವು ಸಾಚಾ ಎಂಬುದನ್ನು ತೋರಿಸಲಿ ಎಂದು ಒತ್ತಾಯಿಸಿದರು.

## ಬದುಕಿನ ಸಾರ್ಥಕತೆಗೆ ರತ್ನತ್ರಯಗಳ ಆಚರಣೆ ಅವಶ್ಯಕ



**ಲಕ್ಷ್ಮೇಶ್ವರ :** ಮನುಷ್ಯ ಜೀವನದಲ್ಲಿ ಧರ್ಮ, ಅರ್ಥ, ಕಾಮ, ಮೋಕ್ಷಗಳೆಂಬ ಚತುರ್ವಿಧ ಪುರುಷಾರ್ಥಗಳನ್ನು ಸಂಪಾದಿಸಬೇಕು. ಇವುಗಳ ಗಳಿಕೆಗೆ ಅಷ್ಟಾವರಣ, ಪಂಚಾಚಾರ ಮತ್ತು ಷಟ್ ಸ್ಥಲಗಳು ಹೆದ್ದಾರಿಯಾಗಿವೆ ಎಂದು ಸವಣೂರಿನ ಸಾಹಿತಿ-ಚಿಂತಕಡಾ.ಗುರುಪಾದಯ್ಯವೀ.ಸಾಲಿಮಠ ಹೇಳಿದರು.

ನಗರದ ಅಕ್ಕಮಹಾದೇವಿ ದೇವಸ್ಥಾನದಲ್ಲಿ ಶ್ರಾವಣ ಮಾಸದ ಪ್ರಯುಕ್ತ ಜರುಗಿದ "ಶ್ರಾವಣ ಸಂಜೆ" ಕಾರ್ಯಕ್ರಮದ ಸರಣಿಯಲ್ಲಿ 7 ನೇ ದಿನದಂದು "ಷಟ್ ಸ್ಥಲಗಳು" ವಿಷಯ ಕುರಿತು ಉಪನ್ಯಾಸ ನೀಡಿದ ಅವರು ವೀರಶೈವ ಧರ್ಮ ಉಗಮ, ಉತ್ಥಾನ, ಪುನರುತ್ಥಾನ ಮತ್ತು ಜಾಗೃತಿಯ ಹಂತಗಳಲ್ಲಿ ಬೆಳೆದು ಬಂದಿದ್ದು ಮನುಷ್ಯ ಮಾನವನಾಗಿ, ಮಾನವ ಮಹಾದೇವನಾಗುವ ಬಗೆಯನ್ನು ತತ್ತ್ವ ಸಿದ್ಧಾಂತಗಳ ತಳಹದಿಯ ಮೇಲೆ ನಿಲುವಳಿಗಳನ್ನು ಕೊಟ್ಟದ್ದು ಸ್ಮರಣೀಯ. ಬದುಕಿನ ಸಾರ್ಥಕತೆಗೆ ಒಂದಿಷ್ಟಾದರೂ ಒಳಿತನ್ನು ಬಯಸಿ ಮುಕ್ತಿ ಮಾರ್ಗ ಪಡೆಯುವ ನಿಟ್ಟಿನಲ್ಲಿ ರತ್ನತ್ರಯಗಳ ಆಚರಣೆ ಆವಶ್ಯಕವಾಗಿದೆ. ಹುಟ್ಟು-ಸಾವುಗಳ ಮಧ್ಯೆ ಮನುಷ್ಯ ಪಾಪ-ಪುಣ್ಯಗಳ ಪರೀಧಿಯಲ್ಲಿ ಬದುಕುವವನಾಗಿದ್ದಾನೆ. ಆತ ಪುಣ್ಯವನ್ನೇ ಮಾಡಿ, ಪುಣ್ಯಾತ್ಮನೆನಿಸಿಕೊಳ್ಳಬೇಕಾದರೆರತ್ನತ್ರಯಗಳಅರಿವು ಮತ್ತು ಆಚರಣೆ ಅತ್ಯವಶ್ಯಕವಾಗಿದ್ದು, ಸುಸಂಸ್ಕೃತ ಮತ್ತು ಸಂಸ್ಕಾರಯುಕ್ತ ಬದುಕಿಗೆ ಇವುಗಳು ಪ್ರೇರಕವಾಗಿವೆ. ಗುರು, ಲಿಂಗ, ಜಂಗಮ, ವಿಭೂತಿ, ರುದ್ರಾಕ್ಷಿ, ಮಂತ್ರ, ಪಾದೋದಕ, ಪ್ರಸಾದ ಇವು ಅಷ್ಟಾವರಣಗಳಾದರೆ, ಲಿಂಗಾಚಾರ, ಸದಾಚಾರ, ಶಿವಾಚಾರ, ಗಣಾಚಾರ ಮತ್ತು ಭೃತ್ಯಾಚಾರಗಳು ಪಂಚಾಚಾರಗಳಾಗಿವೆ. ಭಕ್ತ, ಮಹೇಶ, ಪ್ರಸಾದಿ, ಪ್ರಾಣಲಿಂಗಿ, ಶರಣ, ಐಕ್ಯ ಇವುಗಳೆ ಷಟ್ ಸ್ಥಲಗಳಾಗಿವೆ. ಮನುಷ್ಯ ಜೀವನಕ್ಕೆ ಅಷ್ಟಾವರಣಗಳೇ ಅಂಗವಾಗಿ, ಪಂಚಾಚಾರಗಳೇ ಪ್ರಾಣವಾಗಿ ಮತ್ತು ಷಟ್ ಸ್ಥಲಗಳೇ ಆತ್ಮವಾಗಿವೆ. ಇವುಗಳನ್ನು ನಿತ್ಯ ಜೀವನದಲ್ಲಿ ಸಾಧನೆ ಮಾಡಿಕೊಂಡು ಮನುಷ್ಯ ಮುಕ್ತಿ ಹೊಂದಬೇಕಿದೆ. ಈ ಹಿನ್ನೆಲೆಯಲ್ಲಿ ಭಾರತೀಯ ಆಧ್ಯಾತ್ಮಿಕ ಪರಂಪರೆ ಬಹುತರವಾದ ಧರ್ಮ ಸೂಕ್ಷ್ಮಗಳನ್ನು ಜನಾಂಗಕ್ಕೆ ತಿಳಿಸಿಕೊಟ್ಟಿದೆ ಇವುಗಳ ಗಳಿಕೆ-ಬಳಕೆ ಪ್ರತಿಯೊಬ್ಬರಿಂದಲೂ ಆಗಬೇಕಿದೆ. ಆಧುನಿಕ ಜಗತ್ತಿನಲ್ಲಿ ಸಾಗುತ್ತಿರುವ ಮನುಷ್ಯ ಕೇವಲ ಯಾಂತ್ರಿಕತೆಗೆ ಒತ್ತು ಕೊಟ್ಟು ಮಾನವೀಯತೆಯನ್ನೇ ಮರೆಯುತ್ತಿದ್ದಾನೆ. ಆದ್ದರಿಂದ ಧರ್ಮವಂತರು ಆಚಾರ-ವಿಚಾರ, ಸಂಸ್ಕಾರ-ಸಂಸ್ಕೃತಿಗಳ ಉಳಿವಿಗಾಗಿ ನಿರಂತರ ಕಾರ್ಯಪ್ರವೃತ್ತರಾಗಬೇಕಿದೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಸಂಖ್ಯಾಶಾಸ್ತ್ರಜ್ಞ, ನಿವೃತ್ತ ಶಿಕ್ಷಕ ಎಸ್. ಎಫ್. ಘಂಟಾಮಠ ವಹಿಸಿದ್ದರು. ವೇದಿಕೆಯಲ್ಲಿ ಮುಖ್ಯ ಅತಿಥಿಗಳಾಗಿ ಎಸ್. ಎಸ್. ಪೂಜಾರ, ಎಮ್. ಎ. ತಹಶೀಲ್ದಾರ, ಎ. ಎಮ್. ಮಠದ, ಎಂ. ಪಿ. ಹುಬ್ಬಳ್ಳಿ, ಶರಣಪ್ಪ ಹಸರಡ್ಡಿ ಪಾಲ್ಗೊಂಡು ಮಾತನಾಡಿದರು.

ಲಲಿತಾಸಿ.ಕೆರಿಮನಿಮುಂತಾದವರುಉಪಸ್ಥಿತರಿದ್ದರು.

## ವಿಕಲಚೇತನರಿಗೆ ಶಾಸಕ ಗುಡಗುಂಟಿ ತ್ರಿಚಕ್ರ ವಾಹನ ವಿತರಣೆ



**ಜಮಖಂಡಿ :** ನಗರದ ತಾಲೂಕ ಪಂಚಾಯತ ಆವರಣದಲ್ಲಿ ಮಂಗಳವಾರ ಸನ್2023-24ನೇ ಸಾಲಿನ ಶಾಸಕರ ಪ್ರದೇಶಾಭಿವೃದ್ಧಿ ಅನುದಾನದಲ್ಲಿ ಇಬ್ಬರು ಫಲಾನುಭವಿಗಳಿಗೆ ತ್ರಿಚಕ್ರ ವಾಹನಗಳನ್ನು ಶಾಸಕ ಜಗದೀಶ ಗುಡಗುಂಟಿ ವಿತರಿಸಿದರು.

ನಗರದರುದ್ರಸ್ವಾಮಿ ಪೇಠಗಲ್ಲಿ ನಿವಾಸಿ ಬಸವರಾಜ ಕಡಕೋಳ ಮತ್ತು ಕುಂಬಾರಗಲ್ಲಿ ನಿವಾಸಿ ಅಪ್ಪಾಸಿ ಅಥಣಿ ಇಬ್ಬರು ವಿಕಲಚೇತನರಿಗೆ ತ್ರಿಚಕ್ರ ವಾಹನದ ಕೀ ವಿತರಿಸುವ ಮೂಲಕ ಸುರಕ್ಷಿತ ರಸ್ತೆ ಸಂಚಾರ ನಿಯಮದಡಿಯಲ್ಲಿ ವಾಹನ ಸವಾರಿ ಮಾಡಬೇಕೆಂದು ಕಿವಿಮಾತು ಹೇಳಿದರು.

ಇದೇ ಸಂದರ್ಭದಲ್ಲಿ ತಾ.ಪಂ ಇ.ಓ ಸಂಜೀವ ಜುನ್ನೂರ, ಪೌರಾಯುಕ್ತ ಜ್ಯೋತಿ ಗಿರೀಶ, ಈಶ್ವರ ಆದೆಪ್ಪನವರ, ಅರವಿಂದಗೌಡ ಪಾಟೀಲ, ಅಜಯ ಕಡಪಟ್ಟಿ, ಪರಮಾನಂದ ಚಿಗರಿ, ರಮೇಶ ಆಲಬಾಳ, ಸದಾಶಿವ ಕಡಕೋಳ, ಸಿದ್ದು ನ್ಯಾಮಗೌಡ, ಅಣ್ಣಪ್ಪ ಚಿಕ್ಕಲಗಾರ, ಶ್ರೀಧರ ಕಂಬಿ ಸಹಿತ ಹಲವರು ಇದ್ದರು.

## ವಿದ್ಯಾರ್ಥಿಗಳಲ್ಲಿ ಬ್ಯಾಂಕಿಂಗ ಅರಿವು ಅಗತ್ಯ: ಚನ್ನಗೌಡರ



**ಮೂಡಲಗಿ :** ವಿದ್ಯಾರ್ಥಿಗಳಲ್ಲಿ ಬ್ಯಾಂಕಿನ ವ್ಯವಹಾರಗಳ ಜ್ಞಾನ ಇಂದಿನ ದಿನಗಳಲ್ಲಿ ಬೆಳಸಿಕೊಳ್ಳುವುದು ಅವಶ್ಯಕವಿದೆ ಬ್ಯಾಂಕುಗಳಿಂದ ವಿದ್ಯಾರ್ಥಿಗಳಿಗೆ ದೊರೆಯುವ ಸೌಲಭ್ಯಗಳು ಹಾಗೂ ಕೃಷಿ ವ್ಯಾಪಾರ ಮತ್ತು ವಾಣಿಜ್ಯ ಉದ್ದಿಮೆಗಳಲ್ಲಿ ಬ್ಯಾಂಕುಗಳ ಪಾತ್ರ ಇವುಗಳನ್ನು ತಿಳಿದುಕೊಳ್ಳಲು ವಿದ್ಯಾರ್ಥಿಗಳು ಮುಂದಾಗಬೇಕೆಂದು ಮೂಡಲಗಿಯ ಕರ್ನಾಟಕ ವಿಕಾಸ ಗ್ರಾಮೀಣ ಬ್ಯಾಂಕಿನ ಶಾಖಾ ಪ್ರಬಂಧಕ ಶಿವಪುತ್ರ ಚನ್ನಗೌಡರ ಹೇಳಿದರು.

ಸ್ಥಳೀಯ ಆರ್.ಡಿ.ಎಸ್. ಕಲಾ,ವಾಣಿಜ್ಯ,ವಿಜ್ಞಾನ, ಸಮಾಜ ಕಾರ್ಯ ಪದವಿ ಮಹಾವಿದ್ಯಾಲಯ & ಕರ್ನಾಟಕ ವಿಕಾಸ ಗ್ರಾಮೀಣ ಬ್ಯಾಂಕ್ ಮೂಡಲಗಿ ಇವುಗಳ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಂಡಿರುವ ವಿದ್ಯಾರ್ಥಿಗಳಿಗೆ ಬ್ಯಾಂಕಿನ ವ್ಯವಹಾರಗಳ ಅರಿವು ಕಾರ್ಯಕ್ರಮದಲ್ಲಿ ಮಾತನಾಡಿದರು,

ಬ್ಯಾಂಕುಗಳು ವಿದ್ಯಾರ್ಥಿಗಳ ಶ್ರೆಯೋಭಿವೃದ್ಧಿಗೆ ಅನೇಕ ಯೋಜನೆಗಳನ್ನು ಆರ್ಥಿಕವಾಗಿ ರೂಪಿಸಿವೆ ಅವುಗಳ ಪ್ರಯೋಜನವನ್ನು ಪಡೆದುಕೊಳ್ಳಲು ಯುವ ವಿದ್ಯಾರ್ಥಿಗಳು ಮುಂದಾಗಬೇಕೆಂದರು ಅಲ್ಲದೇ ಇಂದು ಹಣಕಾಸಿನ ವ್ಯವಹಾರಗಳನ್ನು ಸ್ಮಾರ್ಟ್ ಪೋನ ಮೂಲಕ ನಿರ್ವಹಿಸುವಾಗ ಸೈಬರ ಕ್ರೈಮ್‌ಗಳು ಹೆಚ್ಚಾಗುತ್ತಿದ್ದು ಇಂದು ಎಚ್ಚರಿಕೆಯಿಂದ ಹಣಕಾಸಿನ ವ್ಯವಹಾರ ನಿರ್ವಹಿಸಲು ಜಾಗೃತರಾಗುವಂತೆ ಸಲಹೆ ನೀಡಿದರು.

ಕಾಲೇಜು ಪ್ರಾಚಾರ್ಯ ಎಸ್. ಬಿ. ಗೋಟೂರೆ ಅಧ್ಯಕ್ಷತೆ ವಹಿಸಿಕೊಂಡು ಮಾತನಾಡಿ ಬ್ಯಾಂಕುಗಳು ಹಣಕಾಸಿನ ವ್ಯವಹಾರಗಳನ್ನು ಜನರಿಗೆ ಸೇವೆಯ ರೂಪದಲ್ಲಿ ನೀಡುತ್ತವೆ ವಿದ್ಯಾರ್ಥಿಗಳು ಸಹಿತ ಹಣಕಾಸಿನ ವ್ಯವಹಾರಗಳನ್ನು ಬ್ಯಾಂಕಿನ ಮೂಲಕ ನಡೆಸಿ ಬ್ಯಾಂಕಿನ ಸೌಲಭ್ಯಗಳ ಪ್ರಯೋಜನ ಪಡೆದುಕೊಳ್ಳಬೇಕೆಂದರು.

ಕಾರ್ಯಕ್ರಮದಲ್ಲಿ ಬ್ಯಾಂಕಿನ ಸಿಬ್ಬಂದಿಗಳಾದ ವಿದ್ಯಾಶ್ರೀ ಕಾಂಬಳೆ ವಿಜಯ ನಿಡಗುಂದಿ ಉಪನ್ಯಾಸಕ ಜಿ.ಎಸ್. ಹಿರೇಮಠ ಹಾಗೂ ಪದವಿ ವಿಭಾಗದ ಉಪನ್ಯಾಸಕರು ಮತ್ತು ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು ಉಪನ್ಯಾಸಕ ಸಂಜೀವ ಮಂಟೂರ ಸ್ವಾಗತಿಸಿ ನಿರೂಪಿಸಿದರು ಉಪನ್ಯಾಸಕ ಎಸ್.ಕೆ.ಸತ್ತಿ ವಂದಿಸಿದರು.

# ಪುಸ್ತಕಂ ಹಸ್ತ ಭೂಷಣಂ: ಪ್ರೊ. ರಾಮನಾಥಂ ನಾಯುಡು





**ಮೂಡಲಗಿ :** ವಿದ್ಯಾರ್ಥಿಗಳು ಕಷ್ಟಪಟ್ಟು ಅಧ್ಯಯನ ಮಾಡಿ, ವಿದ್ಯಾರ್ಥಿ ಜೀವನವನ್ನು ಸಾರ್ಥಕಪಡಿಸಿಕೊಳ್ಳಬೇಕು. ಯಾವಾಗಲೂ ಸಜ್ಜನರ ಸಂಘ ಮಾಡಬೇಕು ಎಂದು ಮೈಸೂರಿನ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಅಧ್ಯಯನ ಕೇಂದ್ರಗಳ ಡೀನರಾದ ಪ್ರೊ. ಎಂ. ರಾಮನಾಥಂ ನಾಯುಡು ಹೇಳಿದರು.

ಕಲ್ಲೋಳಿ ಪಟ್ಟಣದ ಶ್ರೀ ರಾಮಲಿಂಗೇಶ್ವರ ಶಿಕ್ಷಣ ಸಂಸ್ಥೆಯ ಪ್ರಥಮ ದರ್ಜೆ ಕಾಲೇಜು ಶನಿವಾರ ಆಯೋಜಿಸಿದ್ದ 2024-25 ನೇ ಸಾಲಿನ ವಿವಿಧ ವೇದಿಕೆಗಳಕಾರ್ಯ ಚಟುವಟಿಕೆಯ ಉದ್ಘಾಟನೆ ಹಾಗೂ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ, ಮೈಸೂರು ಇವರ ದೂರ ಸಂಪರ್ಕ ಕಲಿಕಾ ಅಧ್ಯಯನ ಕೇಂದ್ರ ಉದ್ಘಾಟನೆ ಮತ್ತು ಡಾ. ಸುರೇಶ ಹನಗಂಡಿ ಅವರ ಹಸ್ತಪ್ರತಿ ಮತ್ತು ಗ್ರಂಥಸಂಪಾದನೆ ಒಂದು ಚಿಂತನೆ ಕೃತಿ ಬಿಡುಗಡೆಯ ಸಮಾರಂಭದಲ್ಲಿ ಉದ್ಘಾಟಕರಾಗಿ ಆಗಮಿಸಿ ಮಾತನಾಡಿದರು. ಉನ್ನತ ಶಿಕ್ಷಣವನ್ನು ಎಲ್ಲರಿಗೂ ನೀಡುವ ಉದೇಶದಿಂದ ಕರ್ನಾಟಕ ಮುಕ್ತ ವಿಶ್ವವಿದ್ಯಾಲಯ ತಮ್ಮ ಮಹಾವಿದ್ಯಾಲಯದಲ್ಲಿ ದೂರ ಸಂಪರ್ಕ ಅಧ್ಯಯನ ಕೇಂದ್ರವನ್ನು ಆರಂಭಿಸಿದೆ ಅದರ ಸದುಪಯೋಗವನ್ನು ಪಡೆದುಕೊಳ್ಳಿ ಎಂದರು.

ಮುಖ್ಯ ಅತಿಥಿ ಬೆಳಗಾವಿಯ ವಿಶ್ರಾಂತ ಪ್ರಾಧ್ಯಾಪಕ ಡಾ. ಪಿ. ಜಿ. ಕೆಂಪಣ್ಣವರ ವಿದ್ಯಾರ್ಥಿಗಳು ಓದುವ ಹಬ್ಬಲವನ್ನು ಬಿಡಬಾರದು. ಜಗತ್ತು ಜ್ಞಾನಕ್ಕೆ ಗೌರವ ಕೊಡುತ್ತದೆ. ಒಂದು ಶಿಕ್ಷಣ ಸಂಸ್ಥೆ ಯಶಸ್ವಿಯಾಗಿ ಮುನ್ನಡೆಯಲು ನಾಲ್ಕು ಮೇಟ್ಟಿಲುಗಳು ಅವಶ್ಯಕ. ನಿಸ್ವಾರ್ಥ ಆಡಳಿತ ಮಂಡಳಿ, ಕ್ರೀಯಾಶೀಲ ಅಧ್ಯಾಪಕ ವೃಂದ, ವಿದ್ಯಾರ್ಥಿಗಳು ಹಾಗೂ ಶಾಲಾ ಕಟ್ಟದ ಇವೆಲ್ಲವೂ ರಾಮಲಿಂಗೇಶ್ವರ ಕಾಲೇಜಿನಲ್ಲಿ ಇವೆ.ಗ್ರಂಥ ಸಂಪಾದನಾ ಕ್ಷೇತ್ರಕ್ಕೆ ಕೊಡುಗೆ ನೀಡಿದ ಅನೇಕ ವಿದ್ವಾಂಸರ ಲೇಖನಗಳನ್ನು ಕ್ರೋಡೀಕರಿಸಿ ಹಸ್ತಪ್ರತಿ ಮತ್ತು ಗ್ರಂಥಸಂಪಾದನೆ ಒಂದು ಚಿಂತನೆ ಎಂಬ ಕೃತಿಯನ್ನು ಡಾ. ಸುರೇಶ ಹನಗಂಡಿಯವರು ವಿದ್ಯಾರ್ಥಿಳ ಜ್ಞಾನವನ್ನು ಹೆಚ್ಚಿಸಿಕೊಳ್ಳಲು ಸಂಪಾದಿಸಿಕೊಟ್ಟಿದ್ದಾರೆ ಎಂದರು.

ಎಸ್.ಆರ್.ಇ. ಸಂಸ್ಥೆಯ ಚೇರಮನ್ನ ಬಸಗೌಡ ಪಾಟೀಲ ಸಮಾರಂಭದ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಪ್ರಾಚಾರ್ಯ ಡಾ. ಸುರೇಶ ಹನಗಂಡಿ ಪ್ರಾಸ್ತಾವಿಕ ಮಾತುಗಳನ್ನಾಡಿದರು.

ಕಾರ್ಯಕ್ರಮದಲ್ಲಿ ಸಂಸ್ಥೆಯ ನಿರ್ದೇಶಕರುಗಳಾದ ಬಿ. ಎಸ್. ಗೋರೋಶಿ, ಎಂ. ಎಸ್. ಕಪ್ಪಲಗುದ್ದಿ, ಎಸ್ ಎಂ. ಖಾನಾಪೂರ, ಬಿ. ಕೆ. ಗೋರೋಶಿ, ಎನ್.ಆರ್.ಪಾಟೀಲ ಪದವಿ ಪೂರ್ವ ಕಾಲೇಜಿನ ಪ್ರಾಚಾರ್ಯೆ ವಿದ್ಯಾ ಪಂಡಿತ, ಶೈಕ್ಷಣಿಕ ಸಲಹೆಗಾರ ಕೆ.ಎನ್. ಸಂಗಮ, ಮುಖ್ಯೋಪಾಧ್ಯಾಯ ರಾಜು ಉಪ್ಪಾರ, ವಿದ್ಯಾರ್ಥಿ ಪ್ರಧಾನ ಕಾರ್ಯದರ್ಶಿ ಶಿಲ್ಪಾ ನಾಯಿಕವಾಡಿ ಮುಂತಾದವರು ಉಪಸ್ಥಿತರಿದ್ದರು.

ಪ್ರೊ. ವಿಲಾಸ ಕೆಳಗಡೆ ಪ್ರಾರ್ಥಿಸಿದರು, ಪ್ರೊ. ಡಿ.ಎಸ್. ಹುಗ್ಗಿ ಸ್ವಾಗತಿಸಿದರು, ಡಾ. ಕೆ.ಎಸ್. ಪರವ್ವಗೋಳ ನಿರೂಪಿಸಿದರು, ಪ್ರೊ. ಶಂಕರ ನಿಂಗನೂರ ವಂದಿಸಿದರು.

## ಪ್ರವಾಸೋದ್ಯಮ ಉತ್ತೇಜನದಿಂದ ಉದ್ಯೋಗ ಹಾಗೂ ಆದಾಯ ವೃದ್ಧಿಗೆ ಅವಕಾಶ: ಸಚಿವ ಡಾ. ಎಂ.ಬಿ. ಪಾಟೀಲ

**ವಿಜಯಪುರ :** ಐತಿಹಾಸಿಕ ವಿಜಯಪುರ ಜಿಲ್ಲೆಯಲ್ಲಿ ಪ್ರವಾಸೋದ್ಯಮಕ್ಕೆ ವಿಫುಲ ಅವಕಾಶಗಳಿದ್ದು, ಐತಿಹಾಸಿಕ ಪ್ರವಾಸಿ ಸ್ಥಳಗಳ ಅಭಿವೃದ್ಧಿಯಿಂದ ಪ್ರವಾಸೋಧ್ಯಮಕ್ಕೆ ಉತ್ತೇಜನ ದೊರೆತು ಆದಾಯ ವೃದ್ದಿಯೊಂದಿಗೆ ನಿರುದ್ಯೋಗ ಸಮಸ್ಯೆ ನಿವಾರಣೆಗೆ ಸಹಕಾರಿಯಾಗಲಿದೆ ಎಂದು ಬೃಹತ್ ಹಾಗೂ ಮಧ್ಯಮ ಕೈಗಾರಿಕೆ ಹಾಗೂ ಮೂಲ ಸೌಲಭ್ಯ ಅಭಿವೃದ್ಧಿ ಖಾತೆ ಸಚಿವರು ಮತ್ತು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಎಂ.ಬಿ.ಪಾಟೀಲ ಅವರು ಹೇಳಿದರು.

ನಗರದ ಖಾಸಗಿ ಹೊಟೇಲ್‌ನಲ್ಲಿ ನಡೆದ ಪ್ರವಾಸೋದ್ಯಮ ಇಲಾಖೆ ಹಾಗೂ ಕರ್ನಾಟಕ ಟೂರಿಸಂ ಸೊಸೈಟಿ ಇವರ ಸಹಯೋಗದಲ್ಲಿ ಬುಧವಾರ ನಡೆದ ಕನೆಕ್ಟ್-2024ರ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿನ ಗೊಲಗುಮ್ಮಟ, ಇಬ್ರಾಹಿಂ ರೋಜಾ, ಬಾರಾಕಮಾನ, ತಾಜಬಾವಡಿ ಬಾಗಲಕೋಟೆ ಜಿಲ್ಲೆಯ ಬದಾಮಿ-ಐಹೊಳೆಯ ಗುಹಾಂತರ ದೇವಾಲಯ, ಪಟ್ಟದಕಲ್ಲು, ಕೂಡಲ ಸಂಗಮ, ಜಮಖಂಡಿಯ ಅರಮನೆ, ಸೇರಿದಂತೆ ಅನೇಕ ಸ್ಮಾರಕಗಳು, ಐತಿಹಾಸಿಕ ವಾಸ್ತುಶಿಲ್ಪಗಳು, ಪ್ರವಾಸಿ ತಾಣಗಳಲ್ಲಿ ಹೊರ ರಾಜ್ಯ ಮತ್ತು ವಿದೇಶಿ ಪ್ರವಾಸಿಗರನ್ನು ಹೆಚ್ಚಿನ ಸಂಖ್ಯೆಯಲ್ಲಿ ಪ್ರವಾಸಿ ಸ್ಥಳಗಳಿಗೆ ಆಕರ್ಷಿಸಲು ಮೂಲಭೂತ ಸೌಕರ್ಯಗಳನ್ನು ಕಲ್ಪಿಸಿ ಪ್ರವಾಸಿಗರಿಗೆ ಅನೂಕೂಲ ಮಾಡಿ ಪ್ರವಾಸೋಧ್ಯಮಕ್ಕೆ ಉತ್ತೇಜನ ನೀಡಲಾಗುತ್ತಿದೆ ಎಂದು ಅವರು ಹೇಳಿದರು.

ಕೇಂದ್ರ ರಾಜ್ಯ ಹಾಗೂ ಖಾಸಗಿ ಸಹಭಾಗಿತ್ವದಲ್ಲಿ ಪ್ರವಾಸೋದ್ಯಮ ಬೆಳವಣಿಗೆಗೆ ಹಲವು ಯೋಜನೆಗಳನ್ನು ಸಿದ್ಧಪಡಿಸಿಕೊಳ್ಳಲಾಗಿದ್ದು, ಶೀಘ್ರದಲ್ಲಿಯೇ ವಿಜಯಪುರ ವಿಮಾನ ನಿಲ್ದಾಣ ಕಾರ್ಯಾರಂಭವಾಗಲಿರುವುದರಿಂದ ರಾಜ್ಯದ ಪ್ರಮುಖ ಸ್ಥಳಗಳಿಗೆ ಹಾಗೂ ಹೊರ ರಾಜ್ಯಗಳೊಂದಿಗೆ ಅತ್ಯುತ್ತಮ ಸಾರಿಗೆ ಸಂಪರ್ಕ ರಸ್ತೆ, ರೈಲು ಸಾರಿಗೆ ವ್ಯವಸ್ಥೆ ದೊರೆತು, ಹೊರ ರಾಜ್ಯ ಹಾಗೂ ದೇಶ ವಿದೇಶದ ಪ್ರವಾಸಿಗರ ಆಗಮನ ಹೆಚ್ಚಾಗಿ ಪ್ರವಾಸೋದ್ಯಮಕ್ಕೆ ಪ್ರೋತ್ಸಾಹ ದೊರೆಯಲಿದೆ. ಈ ನಿಟ್ಟಿನಲ್ಲಿ ಜಿಲ್ಲೆಯಲ್ಲಿರುವ ಪ್ರವಾಸಿ ತಾಣಗಳ ಕುರಿತು ಪ್ರವಾಸಿಗರ ಗಮನ ಸೆಳೆಯಲು ಜಿಲ್ಲೆಯ ತಾಣಗಳ ಕುರಿತು ಸೂಕ್ತ ಪ್ರಚಾರ ಸೇರಿದಂತೆ ಪ್ರವಾಸಿ ತಾಣಗಳಲ್ಲಿ ಸ್ವಚ್ಛತೆಯನ್ನು ಕಾಪಾಡಿಕೊಳ್ಳಬೇಕು ಎಂದು ಅವರು ಹೇಳಿದರು.

ಜಿಲ್ಲಾಧಿಕಾರಿ ಟಿ.ಭೂಬಾಲನ್ ಮಾತನಾಡಿ, ವಿದೇಶಿ ಪ್ರವಾಸಿಗರನ್ನು ಸೆಳೆಯಲು ಜಿಲ್ಲೆಯಲ್ಲಿ ಸಾಕಷ್ಟು ಅವಕಾಶಗಳಿದ್ದು,ಪ್ರವಾಸಿತಾಣ,ಸ್ಮಾರಕಗಳಐತಿಹಾಸಿಕಮಹತ್ವ ಸಾರಲು, ಸ್ಮಾರಕಗಳಲ್ಲಿ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಿಸ್ವಚ್ಚತೆಗೆಆಧ್ಯತೆನೀಡಿಅವುಗಳನಿರ್ವಹಣೆಮಾಡುವತ್ತ ಕ್ರಮವಹಿಸಲಾಗುತ್ತಿದೆ ಎಂದರು.ನಗರದ ಇಬ್ರಾಹಿಂ ರೋಜಾ ಹಾಗೂ ತಾಜಬಾವಡಿಯ ಒತ್ತುವರಿಯನ್ನು ಈಗಾಗಲೇ ತೆರವುಗೊಳಿಸಲಾಗಿದ್ದು, ಯಾವುದೇ ಸಂರಕ್ಷಿತ ಸ್ಮಾರಕಗಳು, ಕಟ್ಟಡಗಳ ಅತಿಕ್ರಮಣವಾಗದಂತೆ ಮುಂಜಾಗೃತ ಕ್ರಮಗಳನ್ನು ವಹಿಸಬೇಕು ಎಂದರು.

ಪ್ರವಾಸೋಧ್ಯಮ ಇಲಾಖೆಯ ನಿರ್ದೇಶಕರಾದ ಡಾ. ಕೆ.ವಿ. ರಾಜೇಂದ್ರ ಅವರು ಮಾತನಾಡಿ, ಉತ್ತರ ಕರ್ನಾಟಕದ ಭಾಗದಲ್ಲಿ ಪ್ರವಾಸೋಧ್ಯಮಕ್ಕೆ ಹಲವು ಅವಕಾಶಗಳಿದ್ದು, ಮಹಿಳೆಯರು ಕೂಡಾ ಯಾವುದೇ ಭಯವಿಲ್ಲದೇ ಪ್ರವಾಸ ಕೈಗೊಳ್ಳುವಂತೆ ಮಾಡುವಲ್ಲಿ ಸುರಕ್ಷಿತ ಹಾಗೂ ಭಯಮುಕ್ತ ವಾತಾವರಣ ಕಲ್ಪಿಸಲು ಆಧ್ಯತೆ ನೀಡಲಾಗಿದೆ. ಸ್ಥಳಿಯವಾಗಿ ದೊರೆಯುವ ಆಹಾರ, ಕರಕುಶಲ ಕಲೆ, ಉಡುಗೆ ತೊಡುಗೆಗಳ, ಸಂಸ್ಕೃತಿಗಳ ಪರಿಚಯನ್ನು ಪ್ರವಾಸಿಗರಿಗೆ ಪರಿಚಯಿಸಬೇಕು ಎಂದು ಹೇಳಿದರು.

ಕರ್ನಾಟಕ ಟೂರಿಸಂ ಸೊಸೈಟಿಯ ಕಾರ್ಯದರ್ಶಿ ಮನು ಪ್ರಾಸ್ತಾವಿಕ ಮಾತನಾಡಿದರು. ಕಾರ್ಯಕ್ರಮದಲ್ಲಿ ಹೊಟೇಲ್ ಉದ್ಯಮದಾರರು ಟ್ರಾವೆಲ್ ಎಜೆನ್ಸಿಯ ಸದಸ್ಯರ ಜೊತೆ ಸಂವಾದ ಕಾರ್ಯಕ್ರಮ ನಡೆಯಿತು.

ಈ ಸಂದರ್ಭಧಲ್ಲಿ ಧಾರವಾಡ ಬಾಲವಿಕಾಸ ಅಕಾಡೆಮಿಯ ಅಧ್ಯಕ್ಷರಾದ ಸಂಗಮೇಶ ಬಬಲೇಶ್ವರ, ಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿರ್ಹಣಾಧಿಕಾರಿರಿಷಿಆನಂದ,ವಿಜಯಪುರ ಪ್ರವಾಸೊಧ್ಯಮ ಇಲಾಖೆಯ ಉಪನಿರ್ದೇಶಕರಾದ ಮಲ್ಲಿಕಾರ್ಜುನ ಭಜಂತ್ರಿ, ಬಾಗಲಕೋಟೆ ಪ್ರವಾಸೋಧ್ಯಮ ಇಲಾಖೆಯ ಉಪನಿರ್ದೇಶಕರಾದ ಗೋಪಾಲ ಹಿತ್ತಿಲಮನಿ, ಕೆಎಸ್‌ಆರ್‌ಟಿಸಿ ಡಿಸಿ ನಾರಾಯಣ ಕುರುಬರ ಸೇರಿದಂತೆ ವಿಜಯಪುರ ಹಾಗೂ ಬಾಗಲಕೋಟೆ ಜಿಲ್ಲೆಯ ಹೊಟೇಕ್ ಮಾಲಿಕರು, ಉದ್ದಿಮೆದಾರರು, ಟೂರಿಂಗ್ ಏಜೆನ್ಸಿಗಳು ಉಪಸ್ಥಿತರಿದ್ದರು.

# ಎಸ್ಸೆಸ್ಸೆಲ್ಸಿಯಲ್ಲಿ ಸಾಧನೆಗೈದ ವಿದ್ಯಾರ್ಥಿಗಳಿಗೆ ಸನ್ಮಾನ

**ಬೀಳಗಿ :** ತಾಲೂಕಿನ ಅರಕೇರಿ ಗ್ರಾಮದ ಶ್ರೀಮತಿ ಎಂ. ಎಂ. ಸಾವಕಾರ ಸರಕಾರಿ ಪ್ರೌಢ ಶಾಲೆಯಯಲ್ಲಿ ಓದಿದ ವಿದ್ಯಾರ್ಥಿಗಳು ಎಸ್ಸೆಸ್ಸೆಲ್ಸಿ ವಾರ್ಷಿಕ ಪರೀಕ್ಷೆಯಲ್ಲಿ ಪ್ರಥಮ, ದ್ವಿತೀಯ ಮತ್ತು ತೃತೀಯ ಸ್ಥಾನ ಪಡೆದ ವಿದ್ಯಾರ್ಥಿಗಳಿಗೆ ಬಹುಮಾನ ನೀಡಿದ ಮಹನೀಯರನ್ನು ಸನ್ಮಾನಿಸಿ, ಗೌರವಿಸಲಾಯಿತು.




ಗ್ರಾಮದ ವಿಶ್ರಾಂತ ಶಿಕ್ಷಕ ಎ. ಎಸ್. ಪಾಟೀಲ ಹಾಗೂ ಭಾರತೀಯ ಸೇನೆಯಲ್ಲಿ ಮೇಜರ್ ಹುದ್ದೆಯಲ್ಲಿ ಸೇವೆ ಸಲ್ಲಿಸುತ್ತಿರುವ ಮಂಜುನಾಥ ಅ ಪಾಟೀಲ ಕಟುಂಬದಿಂದ 2024-25 ನೇ ಸಾಲಿನಿಂದ ಪ್ರತಿವರ್ಷವೂ ಪ್ರಥಮ ಸ್ಥಾನ ಪಡೆದವರಿಗೆ 10001 ರೂ. ಮತ್ತು ದ್ವಿತೀಯ ಸ್ಥಾನ ಪಡೆದ ವಿದ್ಯಾರ್ಥಿಗೆ 7001 ರೂ. ಒಟ್ಟು 17002 ರೂ. ಬಹುಮಾನ ಘೋಷಣೆ ಮಾಡಿದರು. ಯುವ ಮುಖಂಡ, ಗ್ರಾಪಂ ಉಪಾಧ್ಯಕ್ಷ ಭರಮಪ್ಪ ಸಿ ಬಿಸನಾಳ ತೃತೀಯ ಸ್ಥಾನ ಪಡೆದ ವಿದ್ಯಾರ್ಥಿಗೆ 5001 ರೂ. ಘೋಷಣೆ ಮಾಡಿದರು.

ಪ್ರತಿವರ್ಷವೂ ಪ್ರಥಮ, ದ್ವಿತೀಯ ಬಹುಮಾನ ಕೊಡಮಾಡಲಿರುವ ವಿಶ್ರಾಂತ ಶಿಕ್ಷಕ ಎ. ಎಸ್. ಪಾಟೀಲ ಅವರನ್ನು ಹಾಗೂ ತೃತೀಯ ಬಹುಮಾನ ಕೊಡಮಾಡಲಿರುವ ಅರಕೇರಿ ಗ್ರಾಮ ಪಂಚಾಯತ ಉಪಾಧ್ಯಕ್ಷ ಭರಮಪ್ಪ ಸಿ ಬಿಸನಾಳ ಅವರನ್ನು ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ಗ್ರಾಪಂ ಅಧ್ಯಕ್ಷೆ ಕಾಶವ್ವ ಆಗೋಜಿ, ಎಸ್‌ಡಿಎಂಸಿ ಅಧ್ಯಕ್ಷ ಬಸವರಾಜ ಸಾವಕಾರ, ಗ್ರಾಮದ ಹಿರಿಯರಾದ ಗೋವಿಂದಪ್ಪ ಬೆನಕಟ್ಟಿ, ಕನ್ನಡ ಜಾನಪದ ಪರಿಷತ್ ಜಿಲ್ಲಾಧ್ಯಕ್ಷ ಡಿ. ಎಂ. ಸಾವಕಾರ, ಯಮನಪ್ಪ ಮಲ್ಲಾರ, ವಿ. ಡಿ. ಬೆನಕಟ್ಟಿ, ಎಚ್. ಬಿ. ಆಗೋಜಿ, ಬಿ. ಎಸ್. ಬೂಷಣ್ಣವರ, ಆರ್. ಎಂ. ಸಾವಕಾರ, ಮುಖ್ಯೋಪಾಧ್ಯಾಯಿನಿ ಎಸ್. ಬಿ. ನಿರಂಜಿ, ಲಕ್ಷ್ಮಣಗೌಡ ಪಾಟೀಲ, ವಿಠ್ಠಲ ಕಮ್ಮನ್ನವರ, ಹನಮಂತ ತೆಗ್ಗಿನ್ನವರ, ಕಲ್ಲಪ್ಪ ಆಲಗುಂಡಿ, ಹನಮಂತ ತಳವಾರ, ಎ. ಎಂ. ಗಾಜನ್ನವರ, ಹನಮಂತ ಗಾಣಗೇರ, ಮಲ್ಲಯ್ಯ ಮಠಪತಿ ಹಾಗೂ ಗ್ರಾಪಂ ಸದಸ್ಯರು, ಎಸ್‌ಡಿಎಂಸಿ ಪದಾಧಿಕಾರಿಗಳು, ಶಿಕ್ಷಕರು, ಗ್ರಾಮದ ಹಿರಿಯರು ಪಾಲ್ಗೊಂಡಿದ್ದರು.

# ನಗರಗಳ ಅಭಿವೃದ್ಧಿಗಾಗಿ ಶ್ರಮಿಸುವೆ



**ರಬಕವಿ-ಬನಹಟ್ಟಿ :** ಮುಂದಿನ ಹದಿನೈದು ತಿಂಗಳ ಅಧಿಕಾರಾವಧಿಯಲ್ಲಿ ರಬಕವಿ ಬನಹಟ್ಟಿ ನಗರಸಭೆಯ ವ್ಯಾಪ್ತಿಯ ಎಲ್ಲ ಭಾಗಗಳ ಅಭಿವೃದ್ಧಿಗಾಗಿ ಪ್ರಾಮಾಣಿಕವಾಗಿ ಪ್ರಯತ್ನಿಸುತ್ತೇನೆ ಎಂದು ರಬಕವಿ ಬನಹಟ್ಟಿ ನಗರಸಭೆಯ ನೂತನ ಅಧ್ಯಕ್ಷೆ ವಿದ್ಯಾ ಧಬಾಡಿ ತಿಳಿಸಿದರು.

ಸೋಮವಾರ ರಬಕವಿ ಬನಹಟ್ಟಿ ನಗರಸಭೆಯ ನೂತನ ಅಧ್ಯಕ್ಷೆಯಾಗಿ ಅಧಿಕಾರ ಸ್ವೀಕರಿಸಿ ಅವರು ಮಾತನಾಡಿದರು.

ನಗರಸಭೆಯ ಪ್ರತಿಯೊಂದು ವಾರ್ಡ್ ಸದಸ್ಯರು ಜೊತೆಗೂಡಿ ಚರ್ಚೆ ಮಾಡಿ, ಎಲ್ಲ ವಾರ್ಡ್ ಸದಸ್ಯರನ್ನು ವಿಶ್ವಾಸಕ್ಕೆ ತೆಗೆದುಕೊಂಡು ಕಾರ್ಯ ಮಾಡುತ್ತೇನೆ ಎಂದು ಅಧ್ಯಕ್ಷೆ ವಿದ್ಯಾ ದಬಾಡಿ ತಿಳಿಸಿದರು.


ಶಾಸಕ ಸಿದ್ದು ಸವದಿ ಮಾತನಾಡಿ, ನಗರದ ಅಭಿವೃದ್ಧಿಗಾಗಿ ಮುಂದಿನ ದಿನಗಳಲ್ಲಿ ಸರ್ಕಾರದಿಂದ ಇನ್ನಷ್ಟು ಅನುದಾನಗಳನ್ನು ತಂದುಕೊಡುವುದಾಗಿ ತಿಳಿಸಿದರು. ನಗರದ ಅಭಿವೃದ್ಧಿಗಾಗಿ ಪ್ರಾಮಾಣಿಕವಾಗಿ ಕರ್ತವ್ಯ ನಿರ್ವಹಿಸಿ ಎಂದು ತಿಳಿಸಿದರು.

ಉಪಾಧ್ಯಕ್ಷೆ ಶ್ರೀಮತಿ ದೀಪಾ ಗಾಡಿವಡ್ಡರ, ಪೌರಾಯುಕ್ತ ಜಗದೀಶ ಈಟಿ, ನಗರ ಘಟಕದ ಅಧ್ಯಕ್ಷ ಶ್ರೀಶೈಲ ಬೀಳಗಿ, ಧರೆಪ್ಪ ಉಳ್ಳಾಗಡ್ಡಿ, ಶ್ರೀಶೈಲ ಯಾದವಾಡ, ಶ್ರೀಶೈಲ ಗಸ್ತಿ, ಮಹಾದೇವ ಕೊಟ್ಯಾಳ, ಈರಣ್ಣ ಚಿಂಚಖಂಡಿ, ಪ್ರವೀಣ ಧಬಾಡಿ, ಮಾರುತಿ ಗಾಡಿವಡ್ಡರ, ಗೌರಿ ಮಿಳ್ಳಿ, ಸುವರ್ಣಾ ಕೊಪ್ಪದ, ಈಶ್ವರ ಪಾಟೀಲ, ರೇಖಾ ಕೊರ್ತಿ, ರವಿ ಕೊರ್ತಿ, ಈಶ್ವರ ಕಾಡದೇವರ, ಶಾಂತಾ ಸೋರಗಾಂವಿ, ಮಾಲಾ ಬಾವಲತ್ತಿ, ಶಿವಾನಂದ ಗಾಯಕವಾಡ, ಅಶೋಕ ರಾವಳ, ಗುರು ಶೀಲವಂತ, ಸೇರಿದಂತೆ ಅನೇಕರು ಪಾಲ್ಗೊಂಡಿದ್ದರು.

# ಅನುಪ ಆಸ್ಪತ್ರೆಯ ನಾಲ್ಕು ನೂತನ ಘಟಕಗಳ ಉದ್ಘಾಟನೆ

## ರೋಗಿಗಳ ಸೇವೆಯೇ ದೇವರಿಗೆ ಸಲ್ಲಿಸುವ ನಿಜವಾದ ಸೇವೆ: ಮಹಾಲಿಂಗೇಶ್ವರಶ್ರೀ

**ಮಹಾಲಿಂಗಪುರ :** ವೈದ್ಯರನ್ನು ಜೀವಂತ ದೇವರ ಸ್ವರೂಪದಲ್ಲಿ ಕಾಣುವ ರೋಗಿಗಳ ಸೇವೆಯೇ ಭಗವಂತನಿಗೆ ಮತ್ತು ಸಮಾಜಕ್ಕೆ ಸಲ್ಲಿಸುವ ನಿಜವಾದ ಸೇವೆಯಾಗಿದೆ ಎಂದು ಮಹಾಲಿಂಗೇಶ್ವರ ಮಠದ ಪೀಠಾಧಿಪತಿ ಮಹಾಲಿಂಗೇಶ್ವರ ಶಿವಯೋಗಿ ರಾಜೇಂದ್ರ ಮಹಾಸ್ವಾಮಿಗಳು ಹೇಳಿದರು.



ರವಿವಾರ ಪಟ್ಟಣದ ಪಟ್ಟಣದ ಮುಧೋಳ ರಸ್ತೆಯಲ್ಲಿರುವ ಡಾ।ವಿಜಯ ಹಂಚಿನಾಳ ಅವರ ಅನುಪ ಆಸ್ಪತ್ರೆ ಹಾಗೂ ಹಾರ್ಟಕೇರ್ ಸೆಂಟರಲ್ಲಿನೂತನವಾಗಿಪ್ರಾರಂಭಿಸುತ್ತಿರುವ ಅತ್ಯಾಧುನೀಕ ಸೌಲಭ್ಯಯುಳ್ಳ ನಾಲ್ಕು ನೂತನ ಘಟಕಗಳನ್ನು ಉದ್ಘಾಟಿಸಿ ಮಾತನಾಡಿದ ಅವರು, ಡಾ। ಹಂಚಿನಾಳ ಕುಟುಂಬವು ಕಳೆದ ಮೂರು ದಶಕಗಳ ಆರೋಗ್ಯಸೇವೆಯಿಂದಾಗಿ ಬಾಗಲಕೋಟೆ-ಬೆಳಗಾವಿ, ವಿಜಯಪುರ ಜಿಲ್ಲೆಗಳ ವೈದ್ಯಕೀಯ ಕ್ಷೇತ್ರದಲ್ಲಿ ಪ್ರಖ್ಯಾತಿಯನ್ನು ಪಡೆದಿರುವ ಕುಟುಂಬವಾಗಿದೆ. ಮಹಾಲಿಂಗಪುರದಂತಹ ಪಟ್ಟಣದಲ್ಲಿ ಮಹಾನಗರಗಳಲ್ಲಿ ಇರುವಂತಹ ಅತ್ಯಾಧುನೀಕ ಸೌಲಭ್ಯಯುಳ್ಳ ಘಟಕಗಳನ್ನು ಪ್ರಾರಂಭಿಸಿದ್ದು,ಈಭಾಗದಸಾರ್ವಜನಿಕರಿಗೆ ಅನುಕೂಲವಾಗಲಿದೆ ಎಂದರು.

**ನಾಲ್ಕು ನೂತನ ಘಟಕಗಳ ಉದ್ಘಾಟನೆ :** ಅನುಪ ಆಸ್ಪತ್ರೆಯಲ್ಲಿ ನೂತನವಾಗಿ ಪ್ರಾರಂಭಿಸಿರುವ ಹೃದಯರೋಗಕ್ಕೆ ಸಂಬಂಧಿಸಿದ ಕಾರ್ಡಿಯಾಕ್ ಕ್ಯಾತ ಲ್ಯಾಬ್, ಸ್ತ್ರೀರೋಗಗಳಿಗೆಸಂಬಂಧಿವೂಮೆನ್ಸ್‌ಕ್ಲಿನಿಕ್, ವಿವಿಧಶಸ್ತ್ರಚಿಕಿತ್ಸಾರೋಗಿಗಳಸಂಬಂಧಿಸಿದ ಮ್ಯಾಡೂಲರ್ ಆಪರೇಷನ್ ಥಿಯೇಟರ್, ತುರ್ತು ರೋಗಿಗಳ ಸಂಬಂಧಿಸಿದ ಆಯ್.ಸಿ.ಸಿ.ಯು(ತುರ್ತು ನಿಗಾ ಘಟಕ) ಸೇರಿದಂತೆ ನಾಲ್ಕು ಘಟಕಗಳನ್ನು ಮಹಾಲಿಂಗೇಶ್ವರ ಶಿವಯೋಗಿ ರಾಜೇಂದ್ರ ಮಹಾಸ್ವಾಮಿಜಿಯವರು ಉದ್ಘಾಟಿಸಿದರು.

ಅತಿಥಿಗಳಾಗಿ ಭಾಗವಹಿಸಿದ್ದ ಬೆಳಗಾವಿಯ ನರರೋಗ ತಜ್ಞ ಡಾ। ಜಿ.ಎಂ.ವಾಲಿ, ಮಹಾಲಿಂಗಪುರದ ಶಸ್ತ್ರ ಚಿಕಿತ್ಸಾತಜ್ಞ ಡಾ। ಎ.ಆರ್.ಬೆಳಗಲಿ ಮಾತನಾಡಿ, ಡಾ। ಅನೂಪ ಮತ್ತು ಡಾ। ಅಪೂರ್ವ ಹಂಚಿನಾಳ ದಂಪತಿಗಳು ಮನಸ್ಸು ಮಾಡಿದ್ದರೆ ಹುಬ್ಬಳ್ಳಿ, ಬೆಂಗಳೂರಿನಂತಹ ಮಹಾನಗರಗಳಲ್ಲಿ ಆಸ್ಪತ್ರೆಯನ್ನು ನಿರ್ಮಿಸಬಹುದಾಗಿತ್ತು. ಆದರೆ ಹುಟ್ಟೂರು ಮತ್ತು ಸುತ್ತಮುತ್ತಲಿನ ಗ್ರಾಮೀಣ ಭಾಗದ ಜನರ ಸೇವೆ ಮಾಡಬೇಕೆಂಬ ಸಂಕಲ್ಪದೊಂದಿಗೆ ಮಹಾಲಿಂಗಪುರ ಪಟ್ಟಣದಲ್ಲಿ ಸುಸಜ್ಜಿತ ಆಸ್ಪತ್ರೆಯನ್ನುಪ್ರಾರಂಭಿಸಿಈಭಾಗದಜನರಿಗೆ ಉತ್ತಮ ಆರೋಗ್ಯ ಸೇವೆಯನ್ನು ನೀಡಲು ಮುಂದಾಗಿದ್ದು ಸ್ವಾಗತಾರ್ಹ. ಭವಿಷ್ಯದಲ್ಲಿ ಅನುಪ ಆಸ್ಪತ್ರೆ ಹಾಗೂ ಹಾರ್ಟಕೇರ್ ಸೆಂಟರ್ ಜೊತೆಗೆ ಇಂದು ಪ್ರಾರಂಭವಾದ ವಿವಿಧ ಘಟಕಗಳೊಂದಿಗೆ ಅನುಪ ಆಸ್ಪತ್ರೆ ಹಾಗೂ ಹಾರ್ಟಕೇರ್ ಸೆಂಟರ್ ಆಸ್ಪತ್ರೆಯು ಈ ಭಾಗದಲ್ಲಿನ ರೋಗಿಗಳ ಪಾಲಿನ ಸಂಜೀವಿನಿಯಾಗಿ ಬೆಳೆದು, ಉತ್ತಮ ಆರೋಗ್ಯ ಸೇವೆಯನ್ನು ನೀಡಲಿ ಎಂದು ಶುಭ ಹಾರೈಸಿದರು.

ಅನುಪ ಆಸ್ಪತ್ರೆಯ ಮುಖ್ಯಸ್ಥರಾದ ಡಾ। ವಿಜಯ ಹಂಚಿನಾಳ ಮಾತನಾಡಿ ಕಳೆದ ಮೂರು ದಶಕಗಳಿಂದ ನಮ್ಮ ಅನುಪ ಆಸ್ಪತ್ರೆಯು ಬಾಗಲಕೋಟೆ ಮತ್ತು ಬೆಳಗಾವಿ ಜಿಲ್ಲೆಗಳ ಹಲವು ತಾಲೂಕಿನ ಹತ್ತಾರು ಗ್ರಾಮಗಳ ಜನರಿಗೆ ಉತ್ತಮ ಆರೋಗ್ಯ ಸೇವೆಯನ್ನು ನೀಡುತ್ತಾ ಬಂದಿದೆ. ಇದೀಗ ಮಹಾಲಿಂಗಪುರದ ಜನತೆಯು ಹೆಚ್ಚಿನ ಆರೋಗ್ಯ ಚಿಕಿತ್ಸೆಗಾಗಿ ಬೇರೆ ಬೇರೆ ಮಹಾನಗರಗಳಿಗೆ ಹೋಗುವದನ್ನು ತಪ್ಪಿಸುವದಕ್ಕಾಗಿ,ರೋಗಿಗಳಿಗೆಅವಶ್ಯವಿರುವ ಎಲ್ಲಾ ಚಿಕಿತ್ಸೆಗಳನ್ನು ಒಂದೇ ಆಸ್ಪತ್ರೆಯ ಅಡಿಯಲ್ಲಿ ನೀಡುವ ಉದ್ದೇಶದಿಂದ ನೂತನವಾಗಿ 4 ಪ್ರತ್ಯೇಕ ಘಟಕಗಳನ್ನು ಪ್ರಾರಂಭಿಸಿದ್ದೇವೆ.ನುರಿತಹಾಗೂತಜ್ಞವೈದ್ಯರ ತಂಡವನ್ನುಒಳಗೊಂಡ ಅನುಪ ಆಸ್ಪತ್ರೆಯು 24*7 ಆರೋಗ್ಯಸೇವೆಯನ್ನುಒದಗಿಸಲಿದೆ. ಸಾರ್ವಜನಿಕರು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದರು. ಡಾ।ಅನೂಪ ಹಂಚಿನಾಳ, ಡಾ।ಎಂ.ಜಿ.ಹಿರೇಮಠ, ಡಾ।ಅಪೂರ್ವ ಹಂಚಿನಾಳ, ಶ್ರೀಮತಿ ನಲಿನಿ ಹಂಚಿನಾಳ, ಡಾ।ಸುಭಾಶಿನಿ ಹಿರೇಮಠ, ಡಾ। ಎಂ.ಜಿ.ಹಿರೇಮಠ ಇದ್ದರು.

**ಗಣ್ಯರ ಶುಭ ಹಾರೈಕೆ :** ಅನುಪ ಆಸ್ಪತ್ರೆಯ ನೂತನ ಘಟಕಗಳನ್ನು ಪ್ರಾರಂಭಿಸಿದ ಡಾ।ವಿಜಯ ಹಂಚಿನಾಳ, ಡಾ।ಅನುಪ ಹಂಚಿನಾಳ ಅವರಿಗೆ ತೇರದಾಳ ಶಾಸಕ ಸಿದ್ದು ಸವದಿ ಸೇರಿದಂತೆ ವಿವಿಧ ಊರುಗಳ ಖ್ಯಾತ ವೈದ್ಯರು, ಉದ್ಯಮಿಗಳು, ಜನಪ್ರತಿನಿಧಿಗಳು, ಸಾರ್ವಜನಿಕರು ಸೇರಿದಂತೆ ನೂರಾರು ಜನರು ಆಗಮಿಸಿ ಶುಭ ಹಾರೈಸಿದರು.

# ಸಂಭ್ರಮದ ಮಲ್ಲಿಕಾರ್ಜುನ ಜಾತ್ರೆ



**ರಬಕವಿ :** ಇಲ್ಲಿನ ಮಲ್ಲಿಕಾರ್ಜುನ ದೇವರ ಜಾತ್ರೆ ಆಗಸ್ಟ್ 19 ರಂದು ಸಂಭ್ರಮ ಸಡಗರದಿಂದ ಜರುಗಿತು. ಮಲ್ಲಿಕಾರ್ಜುನ ದೇವರ ಜಾತ್ರೆಯ ಅಂಗವಾಗಿ ಇಲ್ಲಿನ ಮಹಾದೇವರ ದೇವಸ್ಥಾನದಲ್ಲಿ ಮಹಾದೇವ, ಪಾರ್ವತಿ ಮತ್ತು ಗಣೇಶರ ಮೂತಿ9ಯ ಬುತ್ತಿಪೂಜೆ ಭಕ್ತಾದಿಗಳ ಗಮನ ಸೆಳೆಯಿತು. ಮಲ್ಲಿಕಾರ್ಜುನ ದೇವಸ್ಥಾನದಲ್ಲಿಯೂ ಅಲಂಕಾರಗೊಂಡ ಪೂಜೆ ಭಕ್ತರನ್ನು ಆಕರ್ಷಿಸಿತು. ನಗರದ ಶಂಕರಲಿಂಗ ದೇವಸ್ಥಾನ ಮತ್ತು ದಾನಮ್ಮ ದೇವಿ ದೇವಸ್ಥಾನಗಳನ್ನು ಕೂಡ ಶೃಂಗಾರಿಸಲಾಗಿತ್ತು. ನಸುಕಿನ ಜಾವ ನೂರಾರು ಜನ ಭಕ್ತರು ದೀರ್ಘದಂಡ ನಮಸ್ಕಾರ ಹಾಕಿ ತಮ್ಮ ಹರಕೆ ಪೂರೈಸಿದರು. ಮಧ್ಯಾಹ್ನ ಭಕ್ತರು ನಗರದ ಪ್ರಮುಖ ದೇವಸ್ಥಾನಗಳಿಗೆ ತೆರಳಿ ಚಪಾತಿ, ಬಾಳೆ ಹಣ್ಣು ಮತ್ತು ಬೆಲ್ಲದ ನೈವೇದ್ಯ ಅರ್ಪಿಸಿದರು.

ಮಲ್ಲಿಕಾರ್ಜುನ ದೇವರ ಜಾತ್ರೆಗೆ ಬಾಗಲಕೋಟೆ, ವಿಜಯಪುರ, ಬೆಳಗಾವಿ ಮತ್ತು ಧಾರವಾಡ ಜಿಲ್ಲೆಗಳಿಂದ ನೂರಾರು ಪಲ್ಲಕ್ಕಿಗಳು ಆಗಮಿಸಿದ್ದು, ಸ್ಥಳೀಯ ಶಂಕರಲಿಂಗ ದೇವಸ್ಥಾನದಲ್ಲಿ ಪ್ರತಿಷ್ಠಾಪನೆಗೊಂಡಿದ್ದವು.

ಈ ಸಂದರ್ಭದಲ್ಲಿ ಶಂಕರಲಿಂಗ ದೇವಸ್ಥಾನ ಟ್ರಸ್ಟ್ ಸಮಿತಿ ಅಧ್ಯಕ್ಷ ಬಾಲಚಂದ್ರ ಉಮದಿ, ಸಂಜಯ ತೆಗ್ಗಿ, ಈರಣ್ಣ ಗುಣಕಿ, ಬಸವರಾಜ ಅಮ್ಮಣಗಿಮಠ, ಈಶ್ವರ ನಾಗರಾಳ, ಪ್ರಭು ಉಮದಿ, ಸಂಜು ಜೋತಾವರ, ಧರೆಪ್ಪ ಉಳ್ಳಾಗಡ್ಡಿ ಸೇರಿದಂತೆ ಅನೇಕರು ಭಾಗವಹಿಸಿದ್ದರು.

## ಮಹಿಳಾ ವಿದ್ಯಾರ್ಥಿಗಳಿಗೆ ಪತ್ರಿಕಾಲಯಗಳಲ್ಲಿ ತರಬೇತಿಗೆ ಅರ್ಜಿ ಆಹ್ವಾನ

**ಬೆಳಗಾವಿ :** ಕರ್ನಾಟಕ ಮಾಧ್ಯಮ ಅಕಾಡೆಮಿಯು ಪತ್ರಿಕೋದ್ಯಮ ವಿಷಯದಲ್ಲಿ ಸ್ನಾತಕೋತ್ತರ ಪದವಿ ಅಥವಾ ಪದವಿ ಪಡೆದಿರುವ ಮಹಿಳಾ ವಿದ್ಯಾರ್ಥಿಗಳಿಗೆ ಪತ್ರಿಕಾಲಯದಲ್ಲಿ ತರಬೇತಿ ಪಡೆಯಲು ಅರ್ಜಿ ಆಹ್ವಾನಿಸಿದೆ.

ಪ್ರಸಕ್ತ ಸಾಲಿನಲ್ಲಿ 5 ಮಂದಿ ಮಹಿಳಾ ವಿದ್ಯಾರ್ಥಿಗಳಿಗೆ ಪ್ರಮುಖ ದಿನಪತ್ರಿಕೆಗಳ ಕಾರ್ಯಾಲಯಗಳಲ್ಲಿ 2 ತಿಂಗಳ ಕಾಲ ತರಬೇತಿ ಪಡೆಯಲು, ಮಾಸಿಕ ತಲಾ 20,000/- ರೂ ಶಿಶ್ಯವೇತನ ನೀಡಲಾಗುವುದು. ಕರ್ನಾಟಕದ ಯಾವುದೇ ವಿಶ್ವವಿದ್ಯಾಲಯಗಳಲ್ಲಿ ಪತ್ರಿಕೋದ್ಯಮ ವಿಷಯದಲ್ಲಿ ಸ್ನಾತಕೋತ್ತರ/ಪದವಿಯಲ್ಲಿ ಅತಿ ಹೆಚ್ಚು ಅಂಕ ಗಳಿಸಿರುವ ವಿದ್ಯಾರ್ಥಿಗಳಿಗೆ ಆದ್ಯತೆ ನೀಡಲಾಗಿದೆ. ಮಹಿಳಾ ವಿದ್ಯಾರ್ಥಿಗಳು ಆಗಸ್ಟ್ 26 ರೊಳಗೆ ತಮ್ಮ ಸ್ವವಿವರ, ದೂರವಾಣಿ ಸಂಖ್ಯೆ, ಇ-ಮೇಲ್ ವಿಳಾಸ, ಆರ್ಥಿಕ ಸ್ಥಿತಿ, ಅಂಕಪಟ್ಟಿಗಳ ಫೋಟೋ ಪ್ರತಿಯನ್ನು ಸ್ಕ್ಯಾನ್ ಮಾಡಿ karnatakamediaacademy@gmail.com ಇಮೇಲ್‌ಗೆ ಕಳುಹಿಸಬಹುದು. 28 ವರ್ಷದೊಳಗಿನ ಮಹಿಳಾ ವಿದ್ಯಾರ್ಥಿಗಳಿಗೆ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದ್ದು, ಅಭ್ಯರ್ಥಿಗಳನ್ನು ಆಯ್ಕೆ ಮಾಡಲು ಅಕಾಡೆಮಿಯು ಅರ್ಹತಾ ಪರೀಕ್ಷೆ ನಡೆಸಲಿದೆ.

ಈ ಪರೀಕ್ಷೆಯ ದಿನಾಂಕ, ಸ್ಥಳ ಮತ್ತು ಸಮಯವನ್ನು ಸಂದರ್ಶನದ ವೇಳೆ ತಿಳಿಸಲಾಗುವುದು ಎಂದು ಕರ್ನಾಟಕ ಮಾಧ್ಯಮ ಅಕಾಡೆಮಿ ಪ್ರಕಟಣೆ ತಿಳಿಸಿದೆ.

# ಪ್ರತಿ ರವಿವಾರ ಸ್ವಚ್ಛತಾ ಅಭಿಯಾನ

## ಪಟ್ಟಣದ ಸ್ವಚ್ಛತೆಗೆ ಸಾರ್ವಜನಿಕರ ಸಹಕಾರ ಅಗತ್ಯ: ಆನಂದ ಮಡ್ಡೆನ್ನವರ

**ಮಹಾಲಿಂಗಪುರ :** ಪಟ್ಟಣದ ಹಿಂದೂ ರೂದ್ರಭೂಮಿ, ಕುಡಿಯುವ ನೀರಿನ ಮೂಲಾದಾರವಾದ ಕೆರೆ ಹಾಗೂ ದೇವಸ್ಥಾನಗಳ ಸ್ವಚ್ಛತೆಗೆ ಪುರಸಭೆಯ ಜೊತೆಗೆ ಪಟ್ಟಣದ ಯುವಕರು ಮತ್ತು ಸಾರ್ವಜನಿಕರ ಸಹಕಾರವು ಅಗತ್ಯವಿದೆ ಎಂದು ಹಿಂದೂ ಸಂಘಟನೆಯ ಯುವ ಮುಖಂಡ ಆನಂದ ಮಡ್ಡೆನ್ನವರ ಹೇಳಿದರು.



ರವಿವಾರ ಹಿಂದೂ ಸಂಘಟನೆಗಳ ವತಿಯಿಂದ ಹಮ್ಮಿಕೊಂಡಿದ್ದ ಪಟ್ಟಣದ ಮಹಾಲಿಂಗೇಶ್ವರ ದೇವಸ್ಥಾನದ ಗೋಶಾಲೆಯ ಆವರಣದಲ್ಲಿ ಹಮ್ಮಿಕೊಂಡಿದ್ದ ಶ್ರಮದಾನದಲ್ಲಿ ಭಾಗವಹಿಸಿ ಮಾತನಾಡಿದ ಅವರು ಕಳೆದ 11 ವಾರಗಳಿಂದ ನಮ್ಮ ಸಂಘಟನೆಗಳಿಂದ ನಿರಂತರವಾಗಿ ಪ್ರತಿ ರವಿವಾರ ಹಿಂದೂ ರುದ್ರಭೂಮಿ ಹಾಗೂ ಕೆರೆಯ ಆವರಣ, ಗೋಶಾಲೆ, ದೇವಸ್ಥಾನಗಳಲ್ಲಿ ಸ್ವಚ್ಛತೆಯ ಶ್ರಮದಾನ ಮಾಡುತ್ತಿದ್ದೇವೆ ಎಂದರು.

ಯುವ ಮುಖಂಡ ಶಶಿ ಬದ್ನಿಕಾಯಿ ಮಾತನಾಡಿ ನಮ್ಮ ಹಿಂದೂಪರ ಸಂಘಟನೆಗಳ ಸಮಾನ ಮನಸ್ಕ ಯುವಕರು ಪ್ರತಿ ರವಿವಾರದಂತೆ ಒಂದು ವರ್ಷದವರೆಗೆ ನಿರಂತರವಾಗಿ ಪಟ್ಟಣದಲ್ಲಿರುವ ಹಿಂದೂ ರುದ್ರಭೂಮಿ, ವಿವಿಧ ದೇವಸ್ಥಾನಗಳ ಆವರಣವನ್ನು ಸ್ವಚ್ಛತೆ ಮಾಡುವ ಸಂಕಲ್ಪ ಮಾಡಿದ್ದೇವೆ. ಪಕ್ಷಾತೀತ ಮತ್ತು ಜಾತ್ಯಾತೀತವಾಗಿ ಸಾರ್ವಜನಿಕರು ಸ್ವಯಂ ಪ್ರೇರಿತವಾಗಿ ನಮ್ಮ ಸ್ವಚ್ಛತಾ ಅಭಿಯಾನದಲ್ಲಿ ಭಾಗವಹಿಸಬಹುದಾಗಿದೆ ಎಂದರು.

ಮುಂಜಾನೆ 6 ರಿಂದ 9 ಗಂಟೆಯವರೆಗೆ ಹಿಂದೂ ಸಂಘಟನೆಗಳ ಯುವಕರು ಸ್ವಚ್ಛತಾ ಕಾರ್ಯದಲ್ಲಿ ಭಾಗಿಯಾಗಿ ಶ್ರಮದಾನ ಮಾಡಿದರು. ಪುರಸಭೆ ಸದಸ್ಯ ರವಿ ಜವಳಗಿ, ಪತ್ರಕರ್ತ ಚಂದ್ರಶೇಖರ ಮೋರೆ ಶ್ರಮದಾನದಲ್ಲಿ ಭಾಗವಹಿಸಿದ್ದರು.

ಬಸವರಾಜ ಮುರಾರಿ, ಮಹಾಲಿಂಗ ದೇಸಾಯಿ, ಹಣಮಂತ ನಾವ್ಹಿ, ರಾಘು ಪವಾರ, ಅರ್ಜುನ ಪವಾರ, ಅನೀಲ ಖವಾಸಿ, ರಾಜು ನಾವ್ಹಿ, ಮಹಾಲಿಂಗ ಬಾಳಿಕಾಯಿ, ಶಿವರಾಜ ಸಣ್ಣಕ್ಕಿ, ಸಿ.ಬಿ.ಭಜಂತ್ರಿ, ಮಹಾಲಿಂಗ ಜಮಖಂಡಿ, ಚೇತನ ಬಂಡಿವಡ್ಡರ, ರಾಘವೇಂದ್ರ ನೀಲನ್ನವರ ಸೇರಿದಂತೆ ಹಲವರು ಸ್ವಚ್ಛತೆಯ ಸೇವಾ ಕಾರ್ಯದಲ್ಲಿ ಭಾಗವಹಿಸಿದ್ದರು.

# ದೇವರ ಅಸ್ತಿತ್ವಕ್ಕೆ ಮೂರು ವಾದಗಳಿವೆ: ಅಕ್ಕ ನಾಗಲಾಂಬಿಕೆ

**ಜಮಖಂಡಿ :** ಅಮೂಲ್ಯನು, ಅಪ್ರಮಾಣನು, ಅಗೋಚರ, ನಿತ್ಯನಿರ್ಮಲನಾದ ದೇವರ ಅಸ್ತಿತ್ವದತತ್ತ್ವಜ್ಞಾನದಲ್ಲಿಪರಿಪೂರ್ಣತಾವಾದ, ಆದಿಕಾರಣವಾದ ಮತ್ತು ಸದುದ್ದೇಶವಾದ ಎಂದು ಮೂರು ವಾದಗಳಿವೆ ಎಂದು ಧಾರವಾಡದ ಬಸವಯೋಗ ಮಂದಿರದ ಮಾತೋಶ್ರೀ ಅಕ್ಕನಾಗಲಾಂಬಿಕೆ ಹೇಳಿದರು.



ನಗರದ ಬಸವಜ್ಯೋತಿ ಆಂಗ್ಲ ಮಾಧ್ಯಮ ಪ್ರೌಢಶಾಲೆ ಸಭಾಂಗಣದಲ್ಲಿ ದೇವರು ಮತ್ತು ನೈತಿಕಮೌಲ್ಯಗಳು ಕುರಿತು ನಡೆದ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಮಾತನಾಡಿದರು.

ಶರಣರು ದೇವರಿಗೆ ಬಯಲು ಎಂದು ಹೆಸರಿಸಿದ್ದಾರೆ. ಬಯಲು ಎಂದರೆ ಶೂನ್ಯ. ಶೂನ್ಯದಲ್ಲಿ ಶೂನ್ಯ ಕೂಡಿದರೆ, ಶೂನ್ಯದಲ್ಲಿ ಶೂನ್ಯ ಕಳೆದರೆ, ಶೂನ್ಯವನ್ನು ಶೂನ್ಯದಿಂದ ಭಾಗಿಸಿದರೆ ಮತ್ತು ಶೂನ್ಯವನ್ನು ಶೂನ್ಯದಿಂದ ಗುಣಿಸಿದರೆ ಶೂನ್ಯವೇ ಬರುತ್ತದೆ. ಶೂನ್ಯ ಎಲ್ಲವನ್ನು ಒಳಗೊಂಡಿದೆ. ಪೂರ್ಣನಾದ ದೇವರು ಪೂರ್ಣವಾದ ಜಗತ್ತನ್ನು ಸೃಷ್ಟಿಸಿ ಪೂರ್ಣನಾಗಿಯೇ ಉಳಿದಿದ್ದಾನೆ ಎಂಬುದು ಪರಿಪೂರ್ಣತಾವಾದ ಆಗಿದೆ ಎಂದರು.

ತನಗೊಬ್ಬನಿಗೆಕಾರಣವಿಲ್ಲದೇಉಳಿದಿದ್ದೆಲ್ಲದಕ್ಕೂ ಕಾರಣನಾದವನೇ ದೇವರು. ದೇವರು ಎಲ್ಲರಿಗೂ ತಂದೆ-ತಾಯಿ. ಆದರೆ, ದೇವರಿಗೆ ತಂದೆ-ತಾಯಿ ಇಲ್ಲ. ಎಲ್ಲದಕ್ಕೂ ದೇವರೇ ಕಾರಣ ಎಂಬುದು ಆದಿಕಾರಣವಾದವಾಗಿದೆ. ಒಂದು ಉದ್ದೇಶ ಇಟ್ಟುಕೊಂಡು ದೇವರು ಜಗತ್ತನ್ನು ಸೃಷಿಸಿದ್ದಾನೆ. ಕೈಗಡಿಯಾರ ತಯಾರಿಕೆಯ ಹಿಂದೆ ಒಬ್ಬ ತಂತ್ರಜ್ಞನಿರುವಂತೆ ಜಗತ್ತಿನ ಸೃಷ್ಟಿಯ ಹಿಂದೆ ದೇವರಿದ್ದಾನೆ ಎಂಬುದು ಸದುದ್ದೇಶವಾದವಾಗಿದೆ ಎಂದು ವಿವರಿಸಿದರು.

ಪ್ರಾಚಾರ್ಯ ಡಾ.ಟಿ.ಪಿ.ಗಿರಡ್ಡಿ, ದಾನೇಶ್ವರಿ ಮಹಿಳಾ ಮಂಡಳ ಅಧ್ಯಕ್ಷೆ ನಂದಿನಿ ಬಾಂಗಿ, ಸಂಸ್ಥೆಯ ಕಾರ್ಯದರ್ಶಿ ಶಕುಂತಲಾ ಕಡ್ಡಿ ಇದ್ದರು. ಶಿಕ್ಷಕಿ ದೀಪಾ ಪ್ರಾರ್ಥಿಸಿದರು. ಆಡಳಿತಾಧಿಕಾರಿ ಪ್ರೊ.ಬಸವರಾಜ ಕಡ್ಡಿ ಸ್ವಾಗತಿಸಿದರು. ರಾಜೇಸಾಬ ಶೇಖ ನಿರೂಪಿಸಿದರು. ಮುಖ್ಯಶಿಕ್ಷಕಿ ಉಮಾ ಚುಬಚಿ ವಂದಿಸಿದರು.

# ಎದೆ ಹಾಲು ಮಹಿಳೆಯರಲ್ಲಿ ಜಾಗೃತಿ ಕಾರ್ಯಕ್ರಮ




**ಕೊಪ್ಪಳ :** ಕೊಪ್ಪಳ ಇನ್ನರ್ ವೀಲ ಕ್ಲಬ್ ವತಿಯಿಂದ ನಗರದ ಕಿತ್ತೂರು ರಾಣಿ ಚೆನ್ನಮ್ಮ ಸರ್ಕಲ್ ಬಳಿ ಎದೆ ಹಾಲು ಜಾಗೃತಿ ಕಾರ್ಯಕ್ರಮ ಏರ್ಪಡಿಸಲಾಗಿತ್ತು.

ಮಹಿಳೆಯರಲ್ಲಿ ಜಾಗೃತಿ ಮೂಡಿಸಿ ಶಿಶು ಮಕ್ಕಳಿಗೆ ಎದೆ ಹಾಲು ಇದರ ಲಾಭ ಗಳ ಬಗ್ಗೆ ಸವಿಸ್ತಾರವಾಗಿ ಮಹಿಳೆಯರಿಗೆಮಾಹಿತಿನೀಡಿಜಾಗೃತಿನೀಡಲಾಯಿತು ಡಾ, ಕಸ್ತೂರಿ ಯವರು ಇದರ ಬಗ್ಗೆ ಮಾಹಿತಿ ನೀಡಿ-ದರು ಹಾಗೂ ಮಕ್ಕಳಿಗೆಇದರ ಸದುಪಯೋಗ ಪಡೆದುಕೊಳ್ಳುವಲ್ಲಿ ಮಹಿಳೆಯರಿಗೆ ಕರೆ ನೀಡಿದರು

ಕೊಪ್ಪಳ ಇನ್ನರ್ ವೀಲ್ ಕ್ಲಬ್ ಅಧ್ಯಕ್ಷರಾದ ಉಮಾ ಮಹೇಶ್ ತಂಬ್ರಹಳ್ಳಿ ಸಮಾರಂಭದ ಅಧ್ಯಕ್ಷತೆ ವಹಿಸಿ ಮಾತನಾಡಿ ಕಾರ್ಯ ಕ್ರಮ ಯಶಸ್ವಿಗೊಳಿಸಿದ ಮಹಿಳೆಯರಿಗೆ ಅಭಿನಂದನೆ ಸಲ್ಲಿಸಿದರು.

ಇದೆ ವೇಳೆ ಗರ್ಭಿಣಿ ಮಹಿಳೆಯರಿಗೆ ಪೋಷಕಾಂಶ ಪುಡಿಯನ್ನು ಒಳಗೊಂಡ ಆಹಾರ ಕೆಟ್ಟನ್ನು ಹಂಚಿಕೆ ಮಾಡಲಾಯಿತು ಅಲ್ಲದೆ ಸೀರೆಗಳನ್ನುನೀಡಿ ಸೀಮಂತ ಕಾರ್ಯಕ್ರಮ ಸಹ ನಡೆಸಲಾಯಿತು

ಇನ್ನರ್ವಿಲ್ ಕ್ಲಬ್ ಅಧ್ಯಕ್ಷರಾದ ಉಮಾ ಮಹೇಶ್ ತಂಬ್ರಹಳ್ಳಿಸೇರಿದಂತೆಕಾರ್ಯದರ್ಶಿಮೀನಾಕ್ಷಿಬಣ್ಣದ ಬಾವಿ ಉಪಾಧ್ಯಕ್ಷರಾದ ಮಧು ಶೆಟ್ಟರ್ ಖಜಾಂಚಿ ಆಶಾ ಕವಲೂರು ಐ ಎಸ್ ಓ ಮಧು ನಿಲೋಗಲ್ ಎಡಿಟರ್ ನಾಗವೇಣಿ ಹಾಗೂ ಕಾರ್ಯಕಾರಿಣಿ ಸಮಿತಿ ಸದಸ್ಯರು ಹಿರಿಯರಾದ ಡಾ, ರಾಧಾ ಕುಲಕರಣಿ ಅಲ್ಲದೆ ಪಾರ್ವತಿ ಪಾಟೀಲ್ ಶರಣಮ್ಮ ಪಾಟೀಲ್ ಸುಧಾ ಶೆಟ್ಟರ್ ಅನಿತಾ ಬಜಾರ್ ಮಠ ಲಲಿತಾ ಮತ್ತು ಶೋಭಾ ಸೇರಿದಂತೆ ಕಾರ್ಯಕರ್ತರು ಮತ್ತು ಅಭಿಮಾನಿಗಳು ಮಹಿಳೆಯರು ಕಾರ್ಯ ಕ್ರಮದಲ್ಲಿ ಪಾಲ್ಗೊಂಡಿದ್ದರು.

## ರಾಜ್ಯಪಾಲರು ಸಿದ್ದರಾಮಯ್ಯನವರನ್ನು ಪ್ರಾಶಿಕ್ಯೂಶನ್ ಸಮ್ಮತಿಸಿರುವದು ಜನಾಕ್ರೋಶಕ್ಕೆ ನಾಂದಿ: ರಾಘವೇಂದ್ರ ಪಾಲನಕರ

**ಗದಗ :** ರಾಜ್ಯ ರಾಜಕಾರಣದಲ್ಲಿ ಭಾರೀ ಸದ್ದು ಮಾಡುತ್ತಿರುವ ಮುಡಾ ಹಗರಣದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯನವರ ವಿರುದ್ಧ ಪ್ರಾಸಿಕ್ಯೂಷನ್ ಜರುಗಿಸಲು ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅವರು ಅನುಮತಿ ನೀಡಿದ್ದಾರೆ. ಮುಡಾ ನಿವೇಶನ ಹಂಚಿಕೆಯಲ್ಲಿ ಅಕ್ರಮ ನಡೆದಿದೆ.

ಸಿದ್ದರಾಮಯ್ಯ ಅವರ ಪತ್ನಿ ಹೆಸರಿನಲ್ಲಿ ಅಕ್ರಮವಾಗಿ ನಿವೇಶನಗಳನ್ನು ಪಡೆದುಕೊಂಡಿ-ದ್ದಾರೆ ಎಂದು ಆರೋಪಿಸಿ ಸಿದ್ದರಾಮಯ್ಯನವರ ವಿರುದ್ಧ ರಾಜ್ಯಪಾಲರಿಗೆ ದೂರು ನೀಡಲಾಗಿತ್ತು. ದೂರು ನೀಡಿದ್ದ ದಿನವೇ ಸಿದ್ದರಾಮಯ್ಯ ಅವರಿಗೆ ರಾಜ್ಯಪಾಲರು ನೋಟಿಸ್ ಜಾರಿ ಮಾಡಿದ್ದರು. ಇದೀಗ, ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿದ್ದಾರೆ. ಸಿದ್ದರಾಮಯ್ಯ ವಿರುದ್ಧ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿರುವ ಆದೇಶವನ್ನು ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿಗೆತರಾತುರಿಯಲ್ಲಿರವಾನೆಮಾಡಿದ್ದಾರೆ. ಮೈಸೂರುಮೂಲದಸ್ನೇಹಮಯಿಕೃಷ್ಣ,ಮಡಿಕೇರಿಯ ಟಿಜೆ ಅಬ್ರಹಾಂ ಹಾಗೂ ಪ್ರದೀಪ್ ಎನ್ನುವವರು ಸಿದ್ದರಾಮಯ್ಯ ವಿರುದ್ಧ ಪ್ರಾಸಿಕ್ಯೂಷನ್‌ಗೆ ಅನುಮತಿ ಕೋರಿ ರಾಜ್ಯಪಾಲರಿಗೆ ಮನವಿ ಮಾಡಿದ್ದರು. ಈ ಮೂರೂ ಅರ್ಜಿಗಳನ್ನು ಒಟ್ಟಿಗೆ ಸೇರಿಸಿ ಪ್ರಾಸಿಕ್ಯೂಷನ್‌ಗೆ ರಾಜ್ಯಪಾಲರು ತರಾತುರಿಯಲ್ಲಿ ಅನುಮತಿ ನೀಡಲಾಗಿದೆ. ದೂರುದಾರರಾದ ವಕೀಲ ಟಿ.ಜೆ. ಅಬ್ರಹಾಂ, ಸಾಮಾಜಿಕ ಕಾರ್ಯಕರ್ತರಾದ ಸ್ನೇಹಮಯಿ ಕೃಷ್ಣ ಮತ್ತು ಪ್ರದೀಪ್ ಅವರನ್ನು ರಾಜಭವನಕ್ಕೆ ಬರುವಂತೆ ಆಹ್ವಾನಿಸಿ ಈಗಾಗಲೇ ಪ್ರದೀಪ್ ರಾಜಭವನಕ್ಕೆ ಆಗಮಿಸಿ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿರುವ ಪತ್ರ ತೆಗೆದುಕೊಂಡು ಹೋಗಿದ್ದದ್ದಾರೆಎಂಬುದುಸಾರ್ವತ್ರಿಕವಾಗಿದೆ.ಕಳೆದ 40 ವರ್ಷಗಳಿಂದಲೂ ಸಕ್ರಿಯ ರಾಜಕಾರಣದಲ್ಲಿರುವ ಸನ್ಮಾನ್ಯ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯನವರು ಇಲ್ಲಿಯವರೆಗೂಯಾವುದೇಒಂದುಕಪ್ಪುಚುಕ್ಕೆಯನ್ನು ಕೂಡಾ ಹೊಂದದೇ ನಿಷ್ಕಲ್ಮಶ ರಾಜಕಾರಣಿಯಾಗಿ ಸದ್ಯ ಆಡಳಿತಾರೂಢ ಕಾಂಗ್ರೆಸ್ ಸರಕಾರದಲ್ಲಿ ಜನಸ್ಪಂದನೆಯ ಜನಸ್ನೇಹಿ ಜನಪರ ಆಡಳಿತ ನೀಡುತ್ತಿರುವ ಕೀರ್ತಿಯು ಸನ್ಮಾನ್ಯ ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ ಸಲ್ಲುತ್ತದೆ.ಹೀಗಿರುವಾಗ ಪ್ರತಿಪಕ್ಷಗಳ ಕೈಗೊಂಬೆಯಾಗಿ, ಅವರ ತಾಳಕ್ಕೆ ಕುಣಿಯುವಂತೆ ಸನ್ಮಾನ್ಯ ಸಿದ್ದರಾಮಯ್ಯನವರ ವರ್ಚಸ್ಸು ಹಾಗೂ ಪೂರ್ವಪರವನ್ನು ಕೂಡಾ ಲೆಕ್ಕಿಸದೇ ಅವೈಜ್ಞಾನಿಕವಾಗಿ ತರಾತುರಿಯಲ್ಲಿ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯನವರನ್ನು ಪ್ರಾಶಿಕ್ಯೂಶನಗೆ ಒಳಪಡಿಸುವ ಆದೇಶವನ್ನು ಹೊರಡಿಸಿರುವದು ಸಮಸ್ತ ರಾಜ್ಯದ ನಾಗರಿಕರ ಜನಾಕ್ರೋಶಕ್ಕೆನಾಂದಿಯಾಗಿದೆ ಎಂದು ನ್ಯಾಯವಾದಿ ಹಾಗೂಸಾಮಾಜಿಕಕಾರ್ಯಕರ್ತರಾದರಾಘವೇಂದ್ರ ಪಾಲನಕರ ಪ್ರಕಟಣೆಯ ಮೂಲಕ ಜನಾಕ್ರೋಶವನ್ನು ವ್ಯಕ್ತಪಡಿಸಿರುತ್ತಾರೆ.

"SIHI KAHI" Kannada Daily Morning, Editor, Owner, Publisher, Printer by **MARUTI BASAVANTAPPA HOASAMANI** Published from Chittaragi Cross, S.C. Colony, Ward No. 9, Amingada-587112, Tq. Hungund Dist : Bagalkot, Karnataka and Printed at **SUDIN PRINTERS**, Sector No. 33, Shop No. 38 & 40, Opp. Ambedkar Bhavan, **NAVANAGAR, BAGALKOT-587 101.** Dist : Bagalkot, Karnataka State